ಸಂಪುಟ: 06 ಸಂಚಿಕೆ: 110 ಪುಟಗಳು: 08 ಶುಕ್ರವಾರ 03 ಜುಲೈ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಪ್ರತಿದಿನವೂ ನಮ್ಮಿಂದ ಸಾಧ್ಯವಿದೆ ಎಂದು ನಾವು ತಿಳಿದುಕೊಂಡಿದ್ದಕ್ಕಿಂತ ಸ್ವಲ್ಪ ಹೆಚ್ಚು ಕೆಲಸ ಮಾಡಿದರೆ ಯಶಸ್ಸು ನಮಗಾಗಿ ಕಾಯುತ್ತ ಮುಂದೆ ನಿಂತಿರುತ್ತದೆ!

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುಂಗಾರು ಹಂಗಾಮಿನ ಬೆಳೆಗೆ ಭದ್ರೆ ನೀರು ಬಿಡುಗಡೆ ಇಲ್ಲ

• ಉದಯವಾಹಿನಿ, ಬೆಂಗಳೂರು

ಭದ್ರಾ ಜಲಾಶಯದಿಂದ ಮುಂಗಾರು ಹಂಗಾಮಿನ ಬೆಳೆಗೆ ನೀರು ಹರಿಸಲಾಗುವುದಿಲ್ಲ ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಪ್ರಸ್ತುತ ಮಳೆ ಕೊರತೆಯಿಂದಾಗಿ ಭದ್ರಾ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗಿರುವುದಿಲ್ಲ.

ಮುಂಗಾರು ಹಂಗಾಮಿನ ಬೆಳೆಗಳಿಗೆ ಬಲದಂಡೆ ಮತ್ತು ಎಡದಂಡೆ ನಾಲೆಯಲ್ಲಿ ನೀರು ಹರಿಸಲು ಸಾಧ್ಯವಾಗುವುದಿಲ್ಲ. ಜಲಾಶಯದಲ್ಲಿ ಸಂಗ್ರಹವಾಗಿರುವ ನೀರನ್ನು ಕುಡಿಯಲು ಮಾತ್ರ ಬಳಸಲು ಸರ್ಕಾರದ ಆದೇಶವಾಗಿರುವ ಹಿನ್ನೆಲೆಯಲ್ಲಿ ಅಚ್ಚುಕಟ್ಟು ಭಾಗದ ಎಲ್ಲಾ ರೈತರು ಇಲಾಖೆಯೊಂದಿಗೆ ಸಹಕರಿಸಬೇಕಾಗಿ ಈ ಮೂಲಕ ಕೋರಲಾಗಿದೆ. ಮುಂಬರುವ ದಿನಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಮಳೆಯಾಗಿ ಜಲಾಶಯ ಭರ್ತಿಯಾದಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ಆಯೋಜಿಸಿ ಬೆಳೆಗಳಿಗೆ ನೀರು ಹರಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಐಆರ್ : ಮೊದಲ ದಿನವೇ 54,68,607 ಅರ್ಜಿ ಸ್ವೀಕಾರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದ ಮೊದಲ ದಿನವೇ ಉತ್ತಮ ಪ್ರಗತಿ ದಾಖಲಾಗಿದೆ. ಜುಲೈ 1ರ ಸಂಜೆ 6 ಗಂಟೆಯವರೆಗೆ ಒಟ್ಟು 54,68,607 ಗಣತಿ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದ್ದು, ಇದು ರಾಜ್ಯದ ಒಟ್ಟು 5,54,32,314 ಮತದಾರರ ಪೈಕಿ 9.87 ಶೇಕಡಾ ಆಗಿದೆ. ಮತದಾರರ ಗಣತಿ ನಮೂನೆಗಳ ಮುದ್ರಣ ಹಾಗೂ ಬಿಎಲ್‌ಒಗಳಿಗೆ ವಿತರಣೆಯನ್ನು ಸಂಪೂರ್ಣಗೊಳಿಸಲಾಗಿದೆ. ಮನೆ-ಮನೆ ಭೇಟಿ ಮೂಲಕ ಸಂಗ್ರಹವಾಗುತ್ತಿರುವ ಮಾಹಿತಿಯ ಡಿಜಿಟಲೀಕರಣವೂ ಆರಂಭಗೊಂಡಿದ್ದು, ಮೊದಲ ದಿನವೇ 2,38,453 ನಮೂನೆಗಳು (0.43%) ಡಿಜಿಟಲ್ ರೂಪಕ್ಕೆ ಪರಿವರ್ತನೆಯಾಗಿವೆ.

ಇದೇ ವೇಳೆ 26,213 ಮತದಾರರು (0.05%) ಆನ್‌ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಪರಿಶೀಲನೆ ವೇಳೆ ಒಟ್ಟು 2,565 ವಿಶೇಷ ಪ್ರಕರಣಗಳು ಪತ್ತೆಯಾಗಿವೆ. ಅವುಗಳಲ್ಲಿ 1,383 ಮೃತ ಮತದಾರರು, 816 ಶಾಶ್ವತವಾಗಿ ಸ್ಥಳಾಂತರಗೊಂಡವರು, 327 ಈಗಾಗಲೇ ಬೇರೆ ಕ್ಷೇತ್ರದಲ್ಲಿ ನೋಂದಾಯಿಸಿಕೊಂಡವರು, 21 ಮನೆಗೆ ಭೇಟಿ ವೇಳೆ ಗೈರಾಗಿದ್ದವರು ಹಾಗೂ 18 ಇತರೆ ಪ್ರಕರಣಗಳು ಸೇರಿವೆ. ಎಸ್‌ಐಆರ್ ಕಾರ್ಯದಲ್ಲಿ ತೊಡಗಿರುವ ಬಿಎಲ್‌ಒಗಳು ಹಾಗೂ ಸಿಬ್ಬಂದಿಗೆ ಕರ್ತವ್ಯ ಆಪ್ ಮೂಲಕ ಹಾಜರಾತಿ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.

ಮನೆ-ಮನೆ ಸಮೀಕ್ಷೆ ಹಾಗೂ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ರಾಜ್ಯಾದ್ಯಂತ ನಿರಂತರವಾಗಿ ಮುಂದುವರಿದಿದೆ ಎಂದು ಆಯೋಗ ತಿಳಿಸಿದೆ.

# ಭಾರತ-ಜಪಾನ್ ಅಭ್ಯುದಯ ಹೊಸ ಅಧ್ಯಾಯ




ಮೂರು ದಿನಗಳ ಭಾರತ ಪ್ರವಾಸದಲ್ಲಿರುವ ಜಪಾನ್ ಮೊದಲ ಮಹಿಳಾ ಪ್ರಧಾನಿ ಸನಾಯೆ ತಕೈಚಿ, ಗುರುವಾರ) ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಮೋದಿ ಜೊತೆ ದ್ವಿಪಕ್ಷೀಯ ಮಾತುಕತೆ ನಡೆಸಿದ್ದಾರೆ. ಆರ್ಥಿಕ, ರಕ್ಷಣೆ, ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಹೂಡಿಕೆ ಸಂಬಂಧಿ ಸಹಕಾರ ಒಪ್ಪಂದಕ್ಕೆ ಉಭಯ ದೇಶಗಳ ನಾಯಕರು ಸಹಿ ಹಾಕಿದ್ದಾರೆ. ಭಾರತದಲ್ಲಿ ಬರೋಬ್ಬರಿ 10 ಬಿಲಿಯನ್ ಡಾಲರ್ ಹೂಡಿಕೆ ಮಾಡಲು ಜಪಾನ್ ಸಮ್ಮತಿ ಸೂಚಿಸಿದೆ.

### ಎಐ ಕ್ಷೇತ್ರದಲ್ಲಿ ಜುಗಲ್‌ಬಂದಿ


ವಿಶ್ವದ ಡಿಜಿಟಲ್ ಪವರ್‌ಹೌಸ್ ಆಗಿ ಹೊರಹೊಮ್ಮುತ್ತಿರುವ ಭಾರತದ ಸಾಫ್ಟ್‌ವೇರ್ ಸಾಮರ್ಥ್ಯ ಮತ್ತು ಜಪಾನ್‌ನ ನಿಖರ ಉತ್ಪಾದನಾ ತಂತ್ರಜ್ಞಾನ ಒಂದಾದರೆ ಜಾಗತಿಕ ಮಟ್ಟದಲ್ಲಿ ಕ್ರಾಂತಿ ಸೃಷ್ಟಿಸಬಲ್ಲದು ಎಂಬುದಕ್ಕೆ ಈ ಶೃಂಗಸಭೆ ದಿಕ್ಸೂಚಿಯಾಗಿದೆ. ಕೃತಕ ಬುದ್ಧಿಮತ್ತೆ ವಲಯದಲ್ಲಿ ಉಭಯ ದೇಶಗಳು ಜಂಟಿ ಘೋಷಣೆಯನ್ನು ಬಿಡುಗಡೆ ಮಾಡಿದ್ದು, ದ್ವಿಪಕ್ಷೀಯ ಸಹಕಾರವನ್ನು ತೀವ್ರಗೊಳಿಸಲು ಒಪ್ಪಂದ ಮಾಡಿಕೊಂಡಿವೆ.

● ಜಪಾನ್ ಪ್ರಧಾನಿ ತಕೈಚಿ ಅವರನ್ನು 'ನನ್ನ ತಂಗಿ' ಎಂದು ಆತ್ಮೀಯವಾಗಿ ಬರಮಾಡಿಕೊಂಡ ಮೋದಿ ● ಪರಸ್ಪರ ನಂಬಿಕೆಯೇ ನಮ್ಮ ಕಾರ್ಯತಂತ್ರದ ಆಸ್ತಿ ● ಜಪಾನ್ ಪ್ರಧಾನಿ ತೆಕೈಚಿ ಜೊತೆ ಸಭೆ ಬಳಿಕ ಪ್ರಧಾನಿ ಮೋದಿ ಬಣ್ಣನೆ ● 150 ಕಂಪನಿಗಳು, 120 ಒಪ್ಪಂದಗಳು, 12.5 ಬಿಲಿಯನ್ ಡಾಲರ್ ಹೂಡಿಕೆ! ● ಭಾರತ-ಜಪಾನ್ ಐತಿಹಾಸಿಕ

## ಭಾರತದಿಂದಲೇ ಪೆಟ್ರೋಲ್ ಖರೀದಿಸುತ್ತಿದೆ ರಷ್ಯಾ

ಉಕ್ರೇನ್ ದಾಳಿಯಿಂದ ಇಂಧನ ಕೊರತೆ ಎದುರಿಸುತ್ತಿರುವ ರಷ್ಯಾ ದೇಶ ಭಾರತದಿಂದಲೇ ಪೆಟ್ರೋಲ್ ಆಮದು ಮಾಡಿಕೊಳ್ಳಲು ಪ್ರಾರಂಭಿಸಿದೆ. ರಷ್ಯಾದ ಇಂಧನ ಮೂಲಸೌಕರ್ಯದ ಮೇಲೆ ಉಕ್ರೇನ್ ಪದೇ ಪದೇ ಡ್ರೋನ್ ದಾಳಿ ನಡೆಸುತ್ತಿದೆ. ಇದರಿಂದ ರಷ್ಯಾ ದೇಶಾದ್ಯಂತ ಇಂಧನ ಕೊರತೆ ಎದುರಾಗಿದೆ. ವಿಶ್ವದ ಅತಿದೊಡ್ಡ ಇಂಧನ ಉತ್ಪಾದಕರಲ್ಲಿ ಒಂದಾದ ದೇಶವೇ ಈ ಸಂಕಷ್ಟದ ಪರಿಸ್ಥಿತಿಯಲ್ಲಿದೆ.

ಇಂಧನ ರಫ್ತು ಮಾಡುವ ಬದಲು ರಷ್ಯಾ ಈಗ ತಾನೇ ಖರೀದಿ ಮಾಡುತ್ತಿದೆ. ದೇಶೀಯ ಮಾರುಕಟ್ಟೆಯನ್ನು ಪೂರೈಕೆ ಮಾಡುವಂತೆ ವಿದೇಶಗಳನ್ನು ಕೇಳಿಕೊಳ್ಳುತ್ತಿದೆ. ರಷ್ಯಾದ 11 ಟೈಮ್ ಝೋನ್‌ಗಳಲ್ಲಿ ಇಂಧನ ಕೊರತೆ ತಲೆದೋರಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಪಡಿತರ ವ್ಯವಸ್ಥೆ, ಪೆಟ್ರೋಲ್ ಬಂಕ್‌ಗಳಲ್ಲಿ ಉದ್ದನೆಯ ಸರತಿ ಸಾಲುಗಳು ಕಂಡುಬರುತ್ತಿವೆ. ಅಲ್ಲದೇ, ಹಲವಾರು ಪ್ರದೇಶಗಳಲ್ಲಿ ದಾಖಲೆಯ ಪೆಟ್ರೋಲ್ ಬೆಲೆ ಏರಿಕೆ ವರದಿಯಾಗಿದೆ.



**ಉದಯವಾಹಿನಿ, ನವದೆಹಲಿ**

16ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಗೆ ಆಗಮಿಸಿರುವ ಜಪಾನ್ ಪ್ರಧಾನಿ ಸನೇ ತಕೈಚಿ ಅವರನ್ನು ಸ್ವಾಗತಿಸಿದ ಪ್ರಧಾನಿ ನರೇಂದ್ರ ಮೋದಿ, ಈ ಭೇಟಿಯು ಎರಡು ದೇಶಗಳ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಹೊಸ ಅಧ್ಯಾಯದ ಆರಂಭ ಎಂದು ಬಣ್ಣಿಸಿದ್ದಾರೆ. ದ್ವಿಪಕ್ಷೀಯ ಸಭೆ ಬಳಿಕ ಮಾಧ್ಯಮಗಳಿಗೆ ಮಾತನಾಡಿದ ಪ್ರಧಾನಿ, ಜಪಾನ್ ದೇಶ ಮೊದಲ ಮಹಿಳಾ ಪ್ರಧಾನಿಯನ್ನು ತಮ್ಮ ಕಿರಿಯ ಸಹೋದರಿ ಎಂದು ಕರೆದಿದ್ದಾರೆ.

ಭಾರತ - ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಮೊದಲ ಬಾರಿಗೆ ಭೇಟಿ ನೀಡುತ್ತಿರುವ ನನ್ನ ಕಿರಿಯ ಸಹೋದರಿ ಜಪಾನ್ ಪ್ರಧಾನಿ ತಕೈಚಿ ಅವರನ್ನು ನಾನು ತುಂಬು ಹೃದಯದಿಂದ ಸ್ವಾಗತಿಸುತ್ತೇನೆ. ಅವರು ಜಪಾನ್‌ನ ಮೊದಲ ಮಹಿಳಾ ಪ್ರಧಾನಿ ಮಾತ್ರವಲ್ಲದೇ, ದೂರದೃಷ್ಟಿಯುಳ್ಳ, ಜನಪ್ರಿಯ ನಾಯಕಿಯೂ ಆಗಿದ್ದಾರೆ. ಜಪಾನ್‌ನ ನಾರಾ ಪ್ರಾಂತ್ಯದವರಾಗಿರುವ ಅವರು, ಈ ಪ್ರದೇಶದೊಂದಿಗೆ ಭಾರತವು ಬೌದ್ಧ ಧರ್ಮಕ್ಕೆ ಸಂಬಂಧಿಸಿದ ಸಂಪರ್ಕವನ್ನು ಹೊಂದಿದೆ. ಕ್ರಿಯಾತ್ಮಕ ಭೌಗೋಳಿಕ ರಾಜಕೀಯಗಳು ಮತ್ತು ಬದಲಾಗುತ್ತಿರುವ ಜಾಗತಿಕ ಮೈತ್ರಿಗಳ ನಡುವೆ ನವದೆಹಲಿ ಮತ್ತು ಟೋಕಿಯೊ ನಡುವೆ ಆಳವಾದ ಸಂಬಂಧ ಬೇರೂರಿದ್ದು, ಗಮನಾರ್ಹವಾಗಿ ಸ್ಥಿತಿಸ್ಥಾಪಕತ್ವ ಹೊಂದಿದೆ. ಪ್ರಾದೇಶಿಕ ಸಮತೋಲನಕ್ಕೆ ಪ್ರಮುಖ ಆಧಾರವಾಗಿ ಕಾರ್ಯನಿರ್ವಹಿಸುತ್ತದೆ ಎಂದರು. ಪರಸ್ಪರ ನಂಬಿಕೆ ನಮ್ಮ ದೊಡ್ಡ ಕಾರ್ಯತಂತ್ರದ ಆಸ್ತಿ ಎಂದು ಕೆಲವೇ ದಿನಗಳ ಹಿಂದೆ ನಡೆದ ಜಿ 7 ಶೃಂಗಸಭೆಯಲ್ಲಿ ನಾನು ಹೇಳಿದ್ದೆ. ಭಾರತ- ಜಪಾನ್ ಪಾಲುದಾರಿಕೆಯು ಈ ಮಾನದಂಡದ ಮೇಲೆ ಸಂಪೂರ್ಣವಾಗಿ ಪರೀಕ್ಷಿಸಲ್ಪಟ್ಟಿದೆ ಎಂಬ ಹೆಮ್ಮೆ ನನಗಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಭಾರತದ ಬೆಳವಣಿಗೆಯಲ್ಲಿ ಜಪಾನ್ ಪ್ರಮುಖ ಪಾತ್ರ ವಹಿಸಿದೆ. ಇಂದು ಜಪಾನ್ ಪ್ರಧಾನಿಯವರ ಭೇಟಿಯ ಮೂಲಕ ನಾವು ನಮ್ಮ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಹೊಸ ಅಧ್ಯಾಯವನ್ನು ಪ್ರಾರಂಭಿಸುತ್ತಿದ್ದೇವೆ. ಭಾರತ ಜಪಾನ್ ಎರಡೂ ದೇಶಗಳು ವಿಶ್ವದ ಐದು ದೊಡ್ಡ ಆರ್ಥಿಕತೆಗಳಲ್ಲಿ ಸೇರಿವೆ. ನಿಯಮ ಆಧಾರಿತ ಇಂಡೋ ಪೆಸಿಫಿಕ್ ನಮ್ಮ ಹಂಚಿಕೆಯ ಆದ್ಯತೆಯಾಗಿದೆ.

## ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಹೆಚ್ಚಿಸುವತ್ತ ಗಮನ

ಅತಿದೊಡ್ಡ ಪ್ರಜಾಪ್ರಭುತ್ವ ಪ್ರದೇಶವಾಗಿ, ನಾವು ಹಲವಾರು ಪ್ರಮುಖ ಉಪಕ್ರಮಗಳನ್ನು ತೆಗೆದುಕೊಂಡಿದ್ದೇವೆ. ನಾವು ಶಾಂತಿ ಮತ್ತು ಸ್ಥಿರತೆಗೆ ದಾರಿ ಮಾಡಿಕೊಡುತ್ತೇವೆ ಎಂದರು. ಜಪಾನ್ ಪ್ರಧಾನಿ ಸನೇ ತಕೈಚಿ ಅವರೊಂದಿಗೆ ಆರ್ಥಿಕ ಸಂಬಂಧಗಳನ್ನು ವಿಸ್ತರಿಸುವುದು, ಅರೆವಾಹಕಗಳಿಗೆ ಸ್ಥಿತಿಸ್ಥಾಪಕ ಪೂರೈಕೆ ಸರಪಳಿಗಳನ್ನು ಹೆಚ್ಚಿಸುವುದು. ನಿರ್ಣಾಯಕ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಹೆಚ್ಚಿಸುವತ್ತ ಗಮನಹರಿಸಲಾಗಿದೆ. ಮಾತುಕತೆಯ ನಂತರ, ಎರಡೂ ದೇಶಗಳು ಆರ್ಥಿಕ ಭದ್ರತಾ ಸಹಕಾರದ ಜಂಟಿ ಘೋಷಣೆ ಮತ್ತು ಕೃತಕ ಬುದ್ಧಿಮತ್ತೆಯಲ್ಲಿ ಸಹಕಾರದ ಕುರಿತು ಜಂಟಿ ಹೇಳಿಕೆಯನ್ನು ಬಿಡುಗಡೆ ಮಾಡುವ ನಿರೀಕ್ಷೆಯಿದೆ.

ಎರಡೂ ದೇಶಗಳು 2027ರಲ್ಲಿ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ 75ನೇ ವಾರ್ಷಿಕೋತ್ಸವ ಆಚರಿಸುತ್ತಿದ್ದು, ವ್ಯಾಪಾರ, ಹೂಡಿಕೆ, ಆರ್ಥಿಕ ಭದ್ರತೆ, ರಕ್ಷಣೆ ಮತ್ತು ಭದ್ರತೆ, ವಿಜ್ಞಾನ ಮತ್ತು ತಂತ್ರಜ್ಞಾನ, ಸಂಸ್ಕೃತಿ ಹಾಗೂ ಜನರ ನಡುವಿನ ಸಂಪರ್ಕಗಳಂತಹ ವಿವಿಧ ಕ್ಷೇತ್ರಗಳಲ್ಲಿ ಸಹಕಾರವು ಮತ್ತಷ್ಟು ಬಲಗೊಳ್ಳುತ್ತಿದೆ.

### 10 ಬಿಲಿಯನ್ ಡಾಲರ್ ಹೂಡಿಕೆ

ಭಾರತದಲ್ಲಿ ಸುಮಾರು 10 ಬಿಲಿಯನ್ ಡಾಲರ್ ಹೂಡಿಕೆ ಮಾಡಲು ಜಪಾನ್ ಮುಂದಾಗಿದೆ. ಕಳೆದ ಒಂದು ವರ್ಷದಲ್ಲಿ ಉಭಯ ದೇಶಗಳ ಕಾರ್ಪೊರೇಟ್ ವಲಯಗಳ ನಡುವೆ, ಸುಮಾರು 120ಕ್ಕೂ ಹೆಚ್ಚು ಹೊಸ ವ್ಯಾಪಾರ ಒಪ್ಪಂದಗಳು ಏರ್ಪಟ್ಟಿವೆ. ಇದರ ಫಲವಾಗಿ ಜಪಾನ್‌ನಿಂದ ಭಾರತಕ್ಕೆ ಸುಮಾರು 83 ಸಾವಿರ ಕೋಟಿ ರೂಪಾಯಿ ಬಂಡವಾಳ ಹರಿದುಬರಲಿದೆ. ಮುಂದಿನ ದಶಕದಲ್ಲಿ ಭಾರತಕ್ಕೆ ಒಟ್ಟು 10 ಟ್ರಿಲಿಯನ್ ಯೆನ್ ಜಪಾನಿ ಹೂಡಿಕೆಯನ್ನು ಆಕರ್ಷಿಸುವ ಮತ್ತು ಭಾರತದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಪಾನ್ ಕಂಪನಿಗಳ ಸಂಖ್ಯೆಯನ್ನು ದುಪ್ಪಟ್ಟುಗೊಳಿಸುವ ಸ್ಪಷ್ಟ ಹಾಗೂ ಮಹತ್ವಾಕಾಂಕ್ಷೆಯ ಗುರಿಯನ್ನು ಪ್ರಧಾನಿ ಮೋದಿ ಮತ್ತು ಸನಾಯ್ ತಕೈಚಿ ಮರುಸ್ಥಾಪಿಸಿದ್ದಾರೆ. ಭಾರತದಲ್ಲಿ ನಿರಂತರವಾಗಿ ಜಾರಿಗೆ ಬರುತ್ತಿರುವ ಆರ್ಥಿಕ ಸುಧಾರಣೆಗಳು ಮತ್ತು ಈಸ್ ಆಫ್ ಡೂಯಿಂಗ್ ಬಿಸಿನೆಸ್ ವಾತಾವರಣವು ಜಪಾನಿ ಹೂಡಿಕೆದಾರರಿಗೆ ಅತ್ಯುತ್ತಮ ವೇದಿಕೆಯನ್ನು ಒದಗಿಸಿದೆ. ಇದರ ಮುಂದುವರಿದ ಭಾಗವಾಗಿ, ಹಣಕಾಸು ಸೇವೆಗಳ ಏಜೆನ್ಸಿಗಳ ನಡುವಿನ ನೂತನ ಒಪ್ಪಂದವು ಬಂಡವಾಳದ ಹರಿವನ್ನು ಮತ್ತಷ್ಟು ಸುಗಮಗೊಳಿಸಲಿದೆ.

ಭಾರತ ಮತ್ತು ಜಪಾನ್ ನಡುವಿನ ರಕ್ಷಣಾ ಪಾಲುದಾರಿಕೆಯಲ್ಲಿ ಇದೇ ಮೊದಲ ಬಾರಿಗೆ ಅತ್ಯಂತ ಮಹತ್ವದ ಜಂಟಿ ಅಭಿವೃದ್ಧಿ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಭಾರತೀಯ ನೌಕಾಪಡೆಗಾಗಿ ಅತ್ಯಾಧುನಿಕ ರೇಡಿಯೋ ಆಂಟೆನಾ 'ಯುನಿಕಾರ್ನ್' ಅನ್ನು ಜಂಟಿಯಾಗಿ ಅಭಿವೃದ್ಧಿಪಡಿಸುವ ಯೋಜನೆಗೆ ಅಧಿಕೃತ ಚಾಲನೆ ನೀಡಲಾಗಿದೆ. ಪ್ರಧಾನಿ ಮೋದಿ ಅವರ ಪ್ರಕಾರ, ಈ ಯೋಜನೆಯು ಉಭಯ ದೇಶಗಳ ರಕ್ಷಣಾ ತಂತ್ರಜ್ಞಾನ ಪಾಲುದಾರಿಕೆಯಲ್ಲಿ ಹೊಸ ಅಧ್ಯಾಯ ಬರೆಯಲಿದೆ. ಕ್ವಾಡ್ ಒಕ್ಕೂಟದ ಪ್ರಮುಖ ಸದಸ್ಯರಾಗಿರುವ ಭಾರತ ಮತ್ತು ಜಪಾನ್, ರಕ್ಷಣಾ ಕ್ಷೇತ್ರದಲ್ಲಿ ತಂತ್ರಜ್ಞಾನದ ಜಂಟಿ ಸಂಶೋಧನೆ ಮತ್ತು ಉತ್ಪಾದನೆಗೆ ಮುಂದಾಗಿರುವುದು ಭೌಗೋಳಿಕ ರಾಜಕೀಯವಾಗಿ ಅತ್ಯಂತ ಆಯಕಟ್ಟಿನ ನಿರ್ಧಾರವಾಗಿದೆ.



## ಸರ್ಕಾರ ವಿದ್ಯುತ್ ಖಾಸಗೀಕರಣದ ಪರವಾಗಿಲ್ಲ : ಸಚಿವ ಕೆ.ಜೆ.ಜಾರ್ಜ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವುದಕ್ಕೆ ವಿರುದ್ಧವಾಗಿದೆ. ಆದರೆ ಸಚಿವ ಸಂಪುಟದಲ್ಲಿ ಈ ಬಗ್ಗೆ ಚರ್ಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳುವುದಾಗಿ ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತಂತೆ ತಾವು ಹಾಗೂ ಮುಖ್ಯಮಂತ್ರಿಯವರು ನಮ ಅಭಿಪ್ರಾಯಗಳನ್ನು ಹೇಳಿದ್ದೇವೆ. ನಾವು ಖಾಸಗೀಕರಣದ ಪರವಾಗಿಲ್ಲ ಎಂದರು.ಖಾಸಗೀಕರಣದ ಹಿಂದೆ ಸರ್ಕಾರದ ಹಿತಾಸಕ್ತಿಯಿದೆ ಎಂಬ ಆರೋಪ ಸರಿಯಲ್ಲ, ಒಂದು ವೇಳೆ ನಮಗೆ ಖಾಸಗೀಕರಣವಾಗಬೇಕೆಂದಿದ್ದರೆ, ಎಸ್ಕಾಂಗಳು, ಕೆಪಿಟಿಸಿಎಲ್ ಸೇರಿದಂತೆ ಸರ್ಕಾರದ ಅಂಗ ಸಂಸ್ಥೆಗಳು ಹೇಗೆ ವಿರೋಧ ವ್ಯಕ್ತ ಪಡಿಸುತ್ತಿದ್ದವು ಎಂದು ಪ್ರಶ್ನಿಸಿದರು.

ವಿದ್ಯುತ್ ಖಾಸಗೀಕರಣಕ್ಕೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ಕಾನೂನು ತಿದ್ದುಪಡಿ ಮಾಡಿದೆ. ಅದರನ್ವಯ ಟಾಟಾ ಸಂಸ್ಥೆಯವರು ನೇರವಾಗಿ ಕೆಇಆರ್‌ಸಿಗೆ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರದ ಎಸ್ಕಾಂಗಳು ಇದಕ್ಕೆ ವಿರೋಧ ವ್ಯಕ್ತಪಡಿಸುತ್ತಿವೆ ಎಂದು ತಿಳಿಸಿದರು. ಮಳೆ ಕೊರತೆಯ ನಡುವೆಯೂ ಸದ್ಯಕ್ಕೆ ವಿದ್ಯುತ್ ಅಭಾವ ಇಲ್ಲ. ರಾಜ್ಯದಲ್ಲಿ ಪೂರೈಕೆಗೆ ಸಾಕಷ್ಟು ವಿದ್ಯುತ್ ಸಂಗ್ರಹ ಇದೆ. ಮಳೆಗಾಲ ಇನ್ನೂ ಮುಗಿದಿಲ್ಲ, ಮುಂದಿನ ದಿನಗಳಲ್ಲಿ ಮಳೆ ಬರಬಹುದು ಎಂಬ ನಿರೀಕ್ಷೆ ಇದೆ ಎಂದರು.

ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿಗೆ ಅನರ್ಹರು ಸೇರ್ಪಡೆಯಾಗಿದ್ದಾರೆ. ಅದಕ್ಕಾಗಿ ಪರಿಶೀಲನೆ ನಡೆಸಲಾಗುತ್ತಿದೆ.

## ಬೇಬಿ ಕೇರ್ ಸೆಂಟರ್‌ನಲ್ಲಿ ಮಕ್ಕಳಿಗೆ ಹಿಂಸೆ ನೀಡುವವರ ವಿರುದ್ಧ ಕಠಿಣ ಕ್ರಮ : ಸೀಮಂತ್‌ಕುಮಾರ್ ಸಿಂಗ್

• ಉದಯವಾಹಿನಿ, ಬೆಂಗಳೂರು

ಬೇಬಿ ಕೇರ್ ಸೆಂಟರ್‌ನಲ್ಲಿ ಮಕ್ಕಳಿಗೆ ದೈಹಿಕ ಹಿಂಸೆ ನೀಡುತ್ತಿದ್ದವರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೊಂದು ಗಂಭೀರ ಪ್ರಕರಣವಾಗಿದ್ದು, ಈಗಾಗಲೇ ಹೆಚ್‌ಎಎಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಗ್ನೇಯ ವಿಭಾಗದ ಡಿಸಿಪಿ ಮೊಹಮದ್ ಸುಜೀತಾ ಅವರು ತನಿಖೆ ಮಾಡುತ್ತಿದ್ದಾರೆ ಎಂದರು. ಈ ಬಗ್ಗೆ ಪೂರ್ವವಲಯದ ಜಂಟಿ ಪೊಲೀಸ್ ಆಯುಕ್ತ ರಮೇಶ್ ಅವರ ಉಸ್ತುವಾರಿಯಲ್ಲಿ ತನಿಖೆ ನಡೆಯುತ್ತಿದೆ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಆಯುಕ್ತರು ತಿಳಿಸಿದರು. ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಉದ್ಯೋಗಸ್ಥ ಪೋಷಕರು ತಮ ಮಕ್ಕಳನ್ನು ಬೇಬಿ ಕೇರ್ ಸೆಂಟರ್‌ಗೆ ಕಳುಹಿಸುತ್ತಾರೆ.

## ಗೃಹಲಕ್ಷ್ಮಿ, ಗೃಹಜ್ಯೋತಿ ಪರಿಷ್ಕರಣೆ ಮೂಲಕ ಮುಂದಿನ ಚುನಾವಣೆಗೆ ಮಾಹಿತಿ ಸಂಗ್ರಹ: ಹೆಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ಗೃಹ ಲಕ್ಷ್ಮಿ, ಗೃಹ ಜ್ಯೋತಿ ಪರಿಷ್ಕರಣೆ ಮೂಲಕ ಮುಂದಿನ ಚುನಾವಣೆಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಜೆ.ಪಿ.ಭವನದಲ್ಲಿ ಮಾತನಾಡಿದ ಅವರು, ಭವಿಷ್ಯ ಮುಂದಿನ 2028ರ ಚುನಾವಣೆಗೆ ಮಾಹಿತಿ ಕಲೆಹಾಕ್ತಿದ್ದಾರೆ. ಅದರಲ್ಲೂ ಹಣ ಖರ್ಚಾಗಬಾರದು. ಸುಜಾತ ಟ್ಯಾಕಿಸ್ ಎದುರು ಕಟ್ಟಡದ ಟಾಪ್ ಫ್ಲೋರ್‌ನಲ್ಲಿ ಮುಂದಿನ 2028ರ ಚುನಾವಣೆ ಸ್ಟ್ರಾಟಜಿ ಮಾಡ್ತಿದ್ದಾರೆ ಎಂದು ಆರೋಪಿಸಿದರು.

ಡೇಟಾಗೋಸ್ಕರ ಗೃಹ ಲಕ್ಷ್ಮಿ ಆಯ್ತು. ಈಗ ಗೃಹ ಜ್ಯೋತಿ ಯೋಜನೆಗೆ ಮನೆ ಮನೆಯಲ್ಲಿ ಜಾತಿ ಕೇಳ್ತಿದ್ದಾರೆ. ಗೃಹಜ್ಯೋತಿ, ಗೃಹಲಕ್ಷ್ಮಿ, ಶಕ್ತಿ ಯೋಜನೆಗೆ ಒಂದು ಫೋಟೊ ಹಾಕಬೇಕಂತೆ. ಈ ಫೋಟೊಗೆ ಜನ ಎಷ್ಟು ದುಡ್ಡು ಖರ್ಚು ಮಾಡಬೇಕು. ಅನರ್ಹ ಹೆಸರನ್ನು ಡಿಲಿಟ್ ಮಾಡ್ತಾರಂತೆ. ಈಗ ಜ್ಞಾನೋದಯ ಆಗಿದೆ. ಮೂರು ವರ್ಷ ಆದ ಮೇಲೆ ಇಲ್ಲಿವರೆಗೆ ಏನು ಮಾಡ್ತಿದ್ರು. ಅನರ್ಹರಾದವರನ್ನು ತೆಗೆದು ನಿಜವಾದ ಫಲನುಭವಿಗಳಿಗೆ ಕೊಡ್ತಾರಂತೆ. ಕಸ ಬೀದಿಯಲ್ಲಿ ಎಷ್ಟು ಬೀಳುತ್ತಿದೆ ಅಂತ ಮಾಧ್ಯಮದಲ್ಲಿ ತೋರಿಸ್ತಿದ್ದಾರೆ. ಅದರ ಬಗ್ಗೆ ಗಮನಕೊಡಲಿ ಎಂದರು.

ನಗರದ ಅಭಿವೃದ್ಧಿಗೆ 220 ಕೋಟಿ ಅನುದಾನದ ಬಗ್ಗೆ ಕೇಳಲು ಬಂದಿದ್ರು. ಬಿಡದಿ ಟೌನ್ ಶಿಪ್ ಬಗ್ಗೆ ಅವರು ಕೇಳಲು ಬಂದಿರಲಿಲ್ಲ. ಅವರ ಮುಂದೆ ಬಿಡದಿ ಬಗ್ಗೆ ಭಾಷಣ ಮಾಡಿದ್ದು ನಾನು ನೋಡಿದೆ. ಪಾಪ ಅವರು ಹೇಳಿದ್ದಾರೆ, ನನಗೆ ನಾಲ್ಕು ತಾಲ್ಲೂಕು ಮುಖ್ಯ ಅಂದಿದ್ದಾರೆ. ಇವರು ನಾಲ್ಕು ತಾಲ್ಲೂಕಿಗೆ ಸಿಎಂ ಕರ್ನಾಟಕಕ್ಕೆ ಸಿಎಂ, ಬೆಂಗಳೂರು ದಕ್ಷಿಣಕ್ಕೆ ಸಿಎಂ ಏನು ಅಭಿವೃದ್ಧಿ ಆಗಿಲ್ಲ ಅಂತ ಹೇಳಿದ್ದಾರೆ. ನಾನು ರಾಮನಗರಕ್ಕೆ ಪದಾರ್ಪಣೆ ಮಾಡಿದಾಗ ಒಂದು ಹಳ್ಳಿ ರಸ್ತೆ ಆಗಿರಲಿಲ್ಲ ಎಂದು ಟೀಕಿಸಿದರು. ಹಲವಾರು ನಿದರ್ಶನ ಕೊಡಬಲ್ಲೆ, ಕನಕಪುರಕ್ಕೆ ಕರೆಂಟ್ ಇತ್ತಾ 53 ಕಿ.ಮೀ. ಇದೆ ಬೆಂಗಳೂರಿನಿಂದ, ಕರೆಂಟ್, ಕುಡಿಯೋ ನೀರು ಇತ್ತಾ? ಇದೆಲ್ಲ ಯಾರ ಕಾಲದಲ್ಲಿ ಆಗಿದ್ದು? ಹೇಗೆ ಇತ್ತು ಮೊದಲು ಕನಕಪುರ? ನಾನೇನು ಬಂಡೆ



ಒಡೆಯಲು ಹೋಗಿರಲಿಲ್ಲ?. ಬಂಡೆ ಒಡೆದು ವಿದೇಶಕ್ಕೆ ಸಾಗಿಸಲಿಲ್ಲ. ಕನಕಪುರದ ಜನಕ್ಕೆ ಏನು ಮಾಡಬೇಕು ಮಾಡಿದ್ದೇನೆ. ಒಂದು ರಸ್ತೆ ಇರಲಿಲ್ಲ ನೆಟ್ಟಗೆ. ಹಳ್ಳಿಗಳಲ್ಲಿ ಹೆರಿಗೆಗೆ ಚೀಲದಲ್ಲಿ ಎತ್ತಿಕೊಂಡು ಬರ್ತಿದ್ರು. ನಾನು ಅದನ್ನು ಮಾಡಲು ಆಗಿಲ್ಲ ಅಂತ ಹೇಳ್ತಾರೆ ಅಲ್ವಾ? ನಾನು ಮಾಡಲು ಹೊರಟಾಗ ಮಾಡಬೇಡ ಅಂತ ಹೇಳಿದವರು ಯಾರು? ಆವಾಗ ನಿಮಗೆ ಯಾರು ಜ್ಞಾನೋದಯ ಕೊಟ್ಟವರು ಯಾರು? ಈಗ ಮಾಡಿ ಅಂತ ಜ್ಞಾನೋದಯ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

ಬಿಡದಿಯ 4,000 ಸಾವಿರ ಅರ್ಜಿ ಹಾಕಿದವರಿಗೆ ಉತ್ತರ ಕೊಟ್ಟಿಲ್ಲ ಇವರು. ಇದು ಕತೆ ಹೇಳಿಕೊಂಡು ಹೊರಟಿದ್ದಾರೆ. ರೈತರು ಕಾನೂನು ಹೋರಾಟ ಮಾಡುತ್ತಿದ್ದಾರೆ, ನ್ಯಾಯಾಲಯಕ್ಕೆ ಹೊರಟಿದ್ದಾರೆ. ನಾನು ಆಗಸ್ಟ್ ಒಂದರಂದು ಉತ್ತರ ಕೊಟ್ಟಿದ್ದೇನೆ. ವಿರೋಧ ಇತ್ತು ನಂದಗುಡಿಯಲ್ಲಿ, ಇದು ಬೇಡ ಅಂತ ಬಿಟ್ಟೆ. ನಾನು ಅವತ್ತೇ ಟೌನ್ ಶಿಪ್ ಮಾಡಲ್ಲ ಅಂತ ಹೇಳಿದ್ದೇನೆ.

ಸ್ವಾತಂತ್ರ ದಿನಾಚರಣೆ ದಿನವೇ ವಿಶ್ವೇಶ್ವರಯ್ಯ ಬಡಾವಣೆ, ಕಾರಂತ ಬಡಾವಣೆ ಘೋಷಣೆ ಮಾಡಿದ್ದೆ. ಎಸ್.ಎಂ.ಕೃಷ್ಣ ರಸ್ತೆ ಅಂತ ದೊಡ್ಡದಾಗಿ ಹೇಳ್ತಿದ್ದಾರೆ, 20 ವರ್ಷ ಆಯ್ತು ಸೈಟ್ ಕೊಟ್ಟಿದ್ದೀರಾ ಎಂದು ವಾಗ್ದಾಳಿ ನಡೆಸಿದರು.

## ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಕ್ಕಿ ಉತ್ಕೃಷ್ಟ ಗುಣಮಟ್ಟಕ್ಕೆ ಆದ್ಯತೆ ನೀಡಲು ಪ್ರಲ್ಹಾದ ಜೋಶಿ ಮಹತ್ವದ ನಿರ್ಧಾರ


• ಉದಯವಾಹಿನಿ, ಬೆಂಗಳೂರು

ದೇಶದ ಆಹಾರ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ಬಿಜೆಪಿ ಸರ್ಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ.

ದೇಶಾದ್ಯಂತ 80 ಕೋಟಿಗೂ ಹೆಚ್ಚು ಅರ್ಹ ಫಲಾನುಭವಿಗಳಿಗೆ ಶ್ರೇಷ್ಠ ಗುಣಮಟ್ಟದ ಆಹಾರ ಧಾನ್ಯ ವಿತರಿಸುವ ನಿಟ್ಟಿನಲ್ಲಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಮಹತ್ತರ ಬದಲಾವಣೆಗೆ ನಾಂದಿ ಹಾಡಿದ್ದು, ಇದೀಗ ಕೇಂದ್ರ ಸಚಿವ ಸಂಪುಟ ಗೌರವಯುತ ಆಹಾರ ಪೂರೈಕೆಗೆ ಅನುಮೋದನೆ ನೀಡಿದೆ.

ಪಡಿತರದಾರರಿಗೆ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಡಿ ಅಕ್ಕಿ ವಿತರಣೆಯಲ್ಲಿ ಈ ಮೊದಲಿನಷ್ಟೇ ಆಹಾರದ ಪ್ರಮಾಣವನ್ನು ಕಾಯ್ದುಕೊಳ್ಳುವುದರ ಜತೆಗೆ ಅಕ್ಕಿಯ ಗುಣಮಟ್ಟವನ್ನು ಶ್ರೇಷ್ಠಗೊಳಿಸುವಲ್ಲಿ ಸಚಿವ ಜೋಶಿ ಆದ್ಯತೆ ನೀಡಿದ್ದಾರೆ. ನುಚ್ಚಿನ ಪ್ರಮಾಣವನ್ನು ಗರಿಷ್ಠ ಪ್ರಮಾಣದಲ್ಲಿ ಕಡಿತಗೊಳಿಸಿದ್ದಾರೆ.

ಈ ಮೊದಲು ಇದ್ದ ಶೇ. 25ರಷ್ಟು ನುಚ್ಚಿನ ಪ್ರಮಾಣವನ್ನು ಶೇ.10ಕ್ಕೆ ಇಳಿಸಿದ್ದು, ಶೇ.15ರಷ್ಟು ನುಚ್ಚಿನ ಪ್ರಮಾಣ ಕಡಿತಗೊಳಿಸಲಾಗಿದೆ. ಅಲ್ಲದೇ, ಬೇಯಿಸಿದ ಅಕ್ಕಿಯಲ್ಲಿ ಈ ಮೊದಲಿದ್ದ ಶೇ.16ರಷ್ಟು ನುಚ್ಚಿನ ಪ್ರಮಾಣವನ್ನ ಇದೀಗ ಶೇ.5ಕ್ಕೆ ಇಳಿಸಲು ಕ್ರಮ ವಹಿಸಲಾಗಿದೆ. ಈ ಮೂಲಕ ಅತ್ಯಂತ ಶ್ರೇಷ್ಠ ಗುಣಮಟ್ಟದ ಹಾಗೂ ಗಟ್ಟಿತನದ ಅಕ್ಕಿ ಪೂರೈಕೆಗೆ ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ ಜೋಶಿ ಮುಂದಾಗಿದ್ದಾರೆ.



ಪ್ರಧಾನಿ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಕಳೆದ ಮೂರು ದಶಕಗಳಲ್ಲಿ ಇದೇ ಮೊದಲ ಬಾರಿಗೆ ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ ಅಕ್ಕಿ ವಿತರಣೆಯಲ್ಲಿ ಶ್ರೇಷ್ಠ ಗುಣಮಟ್ಟ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಮಾನದಂಡಗಳನ್ನು ರೂಪಿಸಲಾಗಿದೆ. ಈ ಮೂಲಕ ದೇಶದ 80 ಕೋಟಿಗೂ ಅಧಿಕ ಫಲಾನುಭವಿಗಳಿಗೆ ಗೌರವಯುತವಾಗಿ ಉತ್ತಮ ಗುಣಮಟ್ಟ ಮತ್ತು ಪೌಷ್ಟಿಕಯುತ ಆಹಾರ ದೊರೆಯುವಂತೆ ಕೇಂದ್ರ ಸರ್ಕಾರ ಅಗತ್ಯ ಕ್ರಮ ತೆಗೆದುಕೊಂಡಿದೆ.

ದೇಶದ ಪ್ರತಿಯೊಂದು ಅರ್ಹ ಕುಟುಂಬವೂ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಡಿ ಮೊದಲಿನಷ್ಟೇ ಪ್ರಮಾಣದ ಆಹಾರ ಧಾನ್ಯ ಪಡೆಯಲಿದೆ. ಇದರಲ್ಲಿ ಯಾವುದೇ ರೀತಿ ಕಡಿತ ಮಾಡಲಾಗಿಲ್ಲ. ಆದರೆ, ಗುಣಮಟ್ಟದಲ್ಲಿ ಮಾತ್ರ ಪರಿವರ್ತನೆ ತೋರಲಾಗಿದೆ.

## ಬರ ಪರಿಸ್ಥಿತಿ ನಿರ್ವಹಿಸಲು ಯುದ್ಧೋಪಾದಿಯಲ್ಲಿ ಮುನ್ನೆಚ್ಚರಿಕೆ ಮತ್ತು ಪರಿಹಾರ ಕ್ರಮವಹಿಸಿ: ಸಿಎಂಗೆ ಆರ್.ಅಶೋಕ್ ಪತ್ರ

### 150ಕ್ಕೂ ಅಧಿಕ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, ಹಲವೆಡೆ ಸಾಮಾನ್ಯಕ್ಕಿಂತ ಕಡಿಮೆ ಪ್ರಮಾಣದಲ್ಲಿ ಮಳೆ ಸುರಿದಿದೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ತೀವ್ರಗೊಳ್ಳುತ್ತಿರುವ ಬರ ಪರಿಸ್ಥಿತಿಯನ್ನು ನಿರ್ವಹಣೆ ಮಾಡಲು ಯುದ್ಧೋಪಾದಿಯಲ್ಲಿ ಮುನ್ನೆಚ್ಚರಿಕೆ ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಮುಂಗಾರು ಮಳೆಯ ತೀವ್ರ ಕೊರತೆಯಿಂದಾಗಿ ರಾಜ್ಯದ ಹಲವು ಭಾಗಗಳಲ್ಲಿ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಜನತೆ ಸಂಕಷ್ಟ ಎದುರಿಸುತ್ತಿದ್ದಾರೆ. ಬಿತ್ತನೆ ಕಾರ್ಯಗಳು ಹಿನ್ನಡೆ ಕಂಡಿದ್ದು, ಬೆಳೆಗಳು ಒಣಗುವ ಭೀತಿ ಎದುರಾಗಿದೆ. ಜಲಾಶಯಗಳ ನೀರಿನ ಮಟ್ಟವೂ ನಿರಂತರವಾಗಿ ಕುಸಿಯುತ್ತಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯುವ ಆತಂಕ ಎದುರಾಗಿದೆ. ಸದ್ಯದ ಮಾಹಿತಿ ಪ್ರಕಾರ 150ಕ್ಕೂ ಅಧಿಕ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, ಹಲವೆಡೆ ಸಾಮಾನ್ಯಕ್ಕಿಂತ ಕಡಿಮೆ ಪ್ರಮಾಣದಲ್ಲಿ ಮಳೆ ಸುರಿದಿದೆ. ಈಗಾಗಲೇ ಬಿತ್ತನೆಯಾದ ಬೆಳೆಗಳು ತೇವಾಂಶದ ಕೊರತೆಯಿಂದ ಒಣಗುವ ಸ್ಥಿತಿಗೆ ತಲುಪಿದೆ. ಇದು ಕೃಷಿ ಉತ್ಪಾದನೆಯ ಮೇಲೆ ಹಾಗೂ ಉದ್ಯೋಗದ ಮೇಲೆ ನೇರ ಪರಿಣಾಮ



ಬೀರುತ್ತಿದೆ. ಕೃಷಿ ಕಾರ್ಮಿಕರು ನಗರಗಳತ್ತ ಹಾಗೂ ನೆರೆ ರಾಜ್ಯಗಳತ್ತ ವಲಸೆ ಹೋಗುತ್ತಿದ್ದಾರೆ ಎಂದು ಅವರು ಪತ್ರದಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ. ಬೆಳಗಾವಿ, ಬಾಗಲಕೋಟೆ ಸೇರಿದಂತೆ ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಜಲಾಶಯಗಳ ನೀರಿನ ಮಟ್ಟ ಅಪಾಯಕಾರಿಯಾಗಿ ಕುಸಿದಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆ.

ಇದು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಮೇಲೂ ಪರಿಣಾಮ ಬೀರಿದೆ. ಮುಂದೆ ಕುಡಿಯುವ ನೀರಿನ ಸಮಸ್ಯೆ ಯಾವ ಮಟ್ಟಿಗೆ ತೀವ್ರವಾಗಬಹುದು ಎಂಬುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಿದೆ. ಬಹುತೇಕ ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ಕುರಿತು ಸಮಗ್ರ ಪರಿಶೀಲನಾ ಸಭೆ ನಡೆಸಿಲ್ಲ, ತಾಲ್ಲೂಕುಗಳಿಗೆ ಭೇಟಿ ನೀಡಿಲ್ಲ ಎಂಬುದು ದುರದೃಷ್ಟಕರ. ಕೃಷಿ ಇಲಾಖೆಗೆ ಪೂರ್ಣಾವಧಿ ಸಚಿವರೇ ಇಲ್ಲದೆ ಕಾರ್ಯನಿರ್ವಹಿಸುತ್ತಿದೆ. ಲಕ್ಷಾಂತರ ರೈತರ ಬದುಕಿನ ಪ್ರಶ್ನೆ ಎದುರಾಗಿರುವಾಗ, ಕೃಷಿ ಇಲಾಖೆಗೆ ನಾಯಕತ್ವ ಇಲ್ಲವಾಗಿರುವುದು ಆಡಳಿತದ ಆದ್ಯತೆಗಳ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಅವರು ದೂರಿದ್ದಾರೆ.

ಬರ ಎಂದರೆ ಯಾವುದೇ ಪಕ್ಷದ ಸಮಸ್ಯೆಯಲ್ಲ. ಅದು ರಾಜ್ಯದ ಸಮಸ್ಯೆ. ರೈತರ ಬದುಕು ಮತ್ತು ಗ್ರಾಮೀಣ ಆರ್ಥಿಕತೆಯ ಪ್ರಶ್ನೆಯಲ್ಲಿ ರಾಜಕೀಯಕ್ಕಿಂತ ಜನಹಿತವೇ ಮುಖ್ಯವಾಗಬೇಕು.

ಈಗಲಾದರೂ ಪರಿಸ್ಥಿತಿ ಗಂಭೀರತೆ ಅರ್ಥ ಮಾಡಿಕೊಂಡು ತ್ವರಿತ, ಪರಿಣಾಮಕಾರಿ ಹಾಗೂ ಸಮನ್ವಯದ ಕ್ರಮ ಕೈಗೊಂಡರೆ ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಮಾನವೀಯ ,ಆರ್ಥಿಕ ಸಂಕಷ್ಟ ತಡೆಯಲು ಸಾಧ್ಯ ಎಂದು ಅವರು ಸಲಹೆ ನೀಡಿದ್ದಾರೆ. ಬರ ಪರಿಸ್ಥಿತಿಯನ್ನು ನಿರ್ವಹಣೆ ಮಾಡಲು ವಹಿಸಬೇಕಾದ ಕ್ರಮಗಳನ್ನು ಪ್ರತಿಪಕ್ಷ ನಾಯಕ ಆರ್.ಅಶೋಕ್ ಪತ್ರದಲ್ಲಿ ತಿಳಿಸಿದ್ದಾರೆ.

### ವಿಳಂಬ ಮಾಡಿದಷ್ಟೂ ತಡ

ಸಂಕಷ್ಟ ಉಲ್ಬಣಿಸುವ ಮೊದಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಉತ್ತಮ ಆಡಳಿತದ ಲಕ್ಷಣ. ಬರ ಪೀಡಿತ ಪ್ರದೇಶಗಳ ಘೋಷಣೆ ಮಾಡುವಲ್ಲಿ ವಿಳಂಬ ಮಾಡಿದಷ್ಟೂ ರೈತರಿಗೆ ಪರಿಹಾರ, ಬೆಳೆಹಾನಿ ಸಮೀಕ್ಷೆ, ಜಾನುವಾರುಗಳಿಗೆ ಮೇವು, ಕುಡಿಯುವ ನೀರು, ಕೇಂದ್ರ ಸರ್ಕಾರದಿಂದ ಪಡೆಯಬೇಕಾದ ನೆರವು ಮೊದಲಾದ ಪ್ರಕ್ರಿಯೆಗಳು ತಡವಾಗುತ್ತವೆ. ಈ ವಿಳಂಬದ ಬೆಲೆಯನ್ನು ಕಟ್ಟುವುದು ಸರ್ಕಾರವಲ್ಲ, ರೈತರು ಮತ್ತು ಗ್ರಾಮೀಣ ಬಡ ಜನತೆ ಎಂದು ಅವರು ಹೇಳಿದ್ದಾರೆ.

ಈ ದಿನದ ದರ | ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14, 378/Gram 24ct ₹13,180/Gram 22ct | ಬೆಳ್ಳಿ: ₹245.00/Gram

# ಗಣಿ ಹರಾಜು ಪಡೆದೂ ಗಣಿಗಾರಿಕೆ ಆರಂಭಿಸದವರ ಪಟ್ಟಿ ನೀಡಿ

• ಉದಯವಾಹಿನಿ, ಬೆಂಗಳೂರು

ಗಣಿ ಪ್ರದೇಶವನ್ನು ಹರಾಜು ಮೂಲಕ ಪಡೆದುಕೊಂಡ ಬಳಿಕ ನಿಗದಿತ ಕನಿಷ್ಠ ಅವಧಿಯೊಳಗೆ ಗಣಿಗಾರಿಕೆ ಆರಂಭಿಸುವ ಕುರಿತು ಸ್ಪಷ್ಟ ನಿಯಮ ರೂಪಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಪ್ರಸ್ತುತ ಗಣಿ ನೀತಿಯ ಜೊತೆಗೆ ಇತರ ರಾಜ್ಯಗಳ ಗಣಿ ನೀತಿ, ನಿಯಮಗಳು ಹಾಗೂ ಕಾನೂನುಗಳ ಸಮಗ್ರ ಅಧ್ಯಯನ ನಡೆಸಿ ಸೂಕ್ತ ನಿಯಮಾವಳಿ ರೂಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.


ಉದಯವಾಹಿನಿ ಚಿತ್ರ

ಇದೇ ವೇಳೆ ಹರಾಜಿನ ಮೂಲಕ ಗಣಿ ಪ್ರದೇಶಗಳನ್ನು ಪಡೆದುಕೊಂಡು ವರ್ಷಗಳಾದರೂ ಗಣಿಗಾರಿಕೆ ಆರಂಭಿಸದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಶ್ನಿಸಿದ ಅವರು, ರಾಜ್ಯದಲ್ಲಿ ಗಣಿಗಾರಿಕೆಗಾಗಿ ಭೂಮಿ ಪಡೆದಿರುವವರ ಸಂಖ್ಯೆ, ಪ್ರಸ್ತುತ ಅವರ ಸ್ಥಿತಿ, ಇನ್ನೂ ಗಣಿಗಾರಿಕೆ ಆರಂಭಿಸದವರ ಪಟ್ಟಿ, ಅದಕ್ಕೆ ಕಾರಣಗಳು, ಅರಣ್ಯ ಇಲಾಖೆಯಿಂದ ಅನುಮತಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಹಾಗೂ ವಿಳಂಬಕ್ಕೆ ಕಾರಣಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಇಲಾಖೆಯ ಆದಾಯ ಸಂಗ್ರಹದ ಮಾಹಿತಿ ಕೂಡ ಪರಿಶೀಲಿಸಲಾಯಿತು. 2025-26ನೇ ಸಾಲಿನಲ್ಲಿ ಇಲಾಖೆಗೆ ನಿಗದಿಪಡಿಸಿದ್ದ ಆದಾಯ ಗುರಿಯ ಶೇ.98ರಷ್ಟು ಸಾಧನೆಯಾಗಿದ್ದು, ಒಟ್ಟು ರೂ.8,845.39 ಕೋಟಿ ಆದಾಯ ಸಂಗ್ರಹಿಸಲಾಗಿದೆ. 2026-27ನೇ ಸಾಲಿನಲ್ಲಿ ಇದುವರೆಗೆ 1,164.11 ಕೋಟಿ ರೂ. ಆದಾಯ ಸಂಗ್ರಹವಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

## ಕಲ್ಲು ಕ್ವಾರಿಯಲ್ಲಿ 8 ಮಂದಿ ಕಾರ್ಮಿಕರ ಸಾವಿಗೆ ಸಿಎಂ ಶಿವಕುಮಾರ್ ಸಂತಾಪ

ಬೆಂಗಳೂರು ದಕ್ಷಿಣ ತಾಲ್ಲೂಕಿನ ಮಾದಪಟ್ಟಣ ಗ್ರಾಮದ ಬಳಿ ದುರಂತ ಬಗ್ಗೆ ಸಿಎಂ ಡಿ.ಕೆ.ಶಿವಕುಮಾರ್ ಸಂತಾಪ ಸೂಚಿಸಿದ್ದಾರೆ. 8 ಕಾರ್ಮಿಕರು ಮೃತಪಟ್ಟಿರುವುದು ತೀವ್ರ ದುಃಖವನ್ನುಂಟು ಮಾಡಿದೆ. ಭಗವಂತ ಮೃತರ ಆತ್ಮಕ್ಕೆ ಚಿರಶಾಂತಿ ದಯಪಾಲಿಸಲಿ. ಕುಟುಂಬಸ್ಥರಿಗೆ ನೋವು ಭರಿಸುವ ಶಕ್ತಿ ನೀಡಲಿ ಹಾಗೂ ಗಾಯಾಳುಗಳು ಶೀಘ್ರವೇ ಗುಣಮುಖರಾಗಲಿ ಎಂದು ಪ್ರಾರ್ಥಿಸುವೆ ಎಂದಿದ್ದಾರೆ.

ಕಲ್ಲು ಕ್ವಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಜೀವ ರಕ್ಷಣೆ ಹಾಗೂ ಭದ್ರತೆ ಒದಗಿಸುವುದು ಕ್ವಾರಿ ಮಾಲೀಕರ ಕರ್ತವ್ಯವಾಗಿದೆ. ನಿಯಮ ಉಲ್ಲಂಘಿಸುವ ಕ್ವಾರಿಗಳ ವಿರುದ್ಧ ಸರ್ಕಾರ ಸೂಕ್ತ ಕ್ರಮಕೈಗೊಳ್ಳಲಿದೆ ಎಂದು ತಿಳಿಸಿದ್ದಾರೆ.

## ಆಳಂದ ಗಲಭೆ ಪ್ರಕರಣ ಸೇರಿ 52 ಕ್ರಿಮಿನಲ್ ಪ್ರಕರಣಗಳ ಹಿಂಪಡೆಯುವ ಸರ್ಕಾರದ ನಿರ್ಧಾರಕ್ಕೆ ಕರ್ನಾಟಕ ಹೈಕೋರ್ಟ್ ತಡೆ

• ಉದಯವಾಹಿನಿ, ಬೆಂಗಳೂರು

ಆಳಂದ ಗಲಭೆಗೆ ಸಂಬಂಧಿಸಿದ ಪ್ರಕರಣ ಸೇರಿದಂತೆ 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವ ರಾಜ್ಯ ಸರ್ಕಾರದ ಸಚಿವ ಸಂಪುಟದ ನಿರ್ಧಾರಕ್ಕೆ ಕರ್ನಾಟಕ ಹೈಕೋರ್ಟ್ ಗುರುವಾರ ತಡೆ ನೀಡಿದೆ.

ಗಿರೀಶ್ ಭಾರದ್ವಾಜ್ ಕರ್ನಾಟಕ ರಾಜ್ಯ ಪ್ರಕರಣದಲ್ಲಿ ಈ ತಡೆಯಾಜ್ಞೆಯನ್ನು ನೀಡಲಾಗಿದೆ. ಅಪರಾಧ ಪ್ರಕ್ರಿಯಾ ಸಂಹಿತೆಯ) ಸೆಕ್ಷನ್ 321 ಅನ್ನು ರಾಜ್ಯ ಸರ್ಕಾರವು ಅನ್ವಯಿಸಿರುವುದರಲ್ಲಿ ಲೋಪವಿದೆ ಎಂದು ಹೈಕೋರ್ಟ್ ತನ್ನ ಪ್ರಾಥಮಿಕ ಅವಲೋಕನದಲ್ಲಿ ಅಭಿಪ್ರಾಯಪಟ್ಟಿದೆ. ಆರೋಪಿಗಳ ವಿರುದ್ಧದ ಮೊಕದ್ದಮೆಗಳನ್ನು ಹಿಂಪಡೆಯಲು ಸೂಕ್ತ ಕಾನೂನು ಪ್ರಕ್ರಿಯೆಯ ಮೂಲಕವೇ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ಹೈಕೋರ್ಟ್ ಈ ಹಿಂದೆ ನೀಡಿದ್ದ ಆದೇಶವನ್ನು ಈ ನಿರ್ಧಾರವು ಉಲ್ಲಂಘಿಸಿದೆ ಎಂದು ನ್ಯಾಯಪೀಠವು ಗಮನಸೆಳೆದಿದೆ.

## ಆಳಂದ ದರ್ಗಾ ಗಲಭೆ ಸೇರಿ 52 ಕೇಸ್ ಹಿಂಪಡೆಯುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ತಡೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಆಳಂದ ದರ್ಗಾ ಗಲಭೆಗೆ ಸಂಬಂಧಿಸಿದ ಪ್ರಕರಣ ಸೇರಿದಂತೆ 52 ಕ್ರಿಮಿನಲ್ ಪ್ರಕರಣಗಳನ್ನು ಹಿಂತೆಗೆದುಕೊಳ್ಳಲು ಉದ್ದೇಶಿಸಿದ್ದ ರಾಜ್ಯ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟದ ನಿರ್ಧಾರಕ್ಕೆ ಇದೀಗ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ. ಗಿರೀಶ್ ಭಾರದ್ವಾಜ್ ಕರ್ನಾಟಕ ರಾಜ್ಯ ಪ್ರಕರಣದಲ್ಲಿ ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 321 ಅನ್ನು ರಾಜ್ಯವು ಅನ್ವಯಿಸಿದ್ದರಲ್ಲಿ ದೋಷವಿದೆ ಎಂದು ಕಂಡುಹಿಡಿದಿರುವ ಹೈಕೋರ್ಟ್ ಪೀಠ ಈ ತಡೆಯಾಜ್ಞೆ ಜಾರಿಗೊಳಿಸಿದೆ.

ಸರಿಯಾದ ಕಾನೂನು ಪ್ರಕ್ರಿಯೆಯ ಮೂಲಕ ಆರೋಪಿಗಳ ವಿರುದ್ಧದ ಮೊಕದ್ದಮೆಗಳನ್ನು ಹಿಂತೆಗೆದುಕೊಳ್ಳುವಂತೆ ರಾಜ್ಯಕ್ಕೆ ಕೋರಿದ್ದ ಕರ್ನಾಟಕ ಹೈಕೋರ್ಟ್‌ನ ಹಿಂದಿನ ಆದೇಶವನ್ನು ಈ ನಿರ್ಧಾರವು ಉಲ್ಲಂಘಿಸಿದೆ ಎಂಬುದನ್ನು ಹೈಕೋರ್ಟ್ ಪೀಠ ತನ್ನ ಪ್ರಾಥಮಿಕ ಅವಲೋಕನದಲ್ಲಿ ಗಮನಿಸಿದೆ. ಇತ್ತೀಚೆಗೆ 52 ಪ್ರಕರಣಗಳನ್ನು ಹಿಂಪಡೆಯಲು ಸಚಿವ ಸಂಪುಟ ನಿರ್ಧರಿಸಿತ್ತು. ಹೈಕೋರ್ಟ್‌ನ ಮಧ್ಯಂತರ ಆದೇಶವು ಮುಂದಿನ ವಿಚಾರಣೆಯವರೆಗೆ ನಿರ್ಧಾರವನ್ನು ತಡೆಹಿಡಿದಿದೆ. ಮುಂದಿನ ವಿಚಾರಣೆಯ ದಿನಾಂಕದ ವಿವರಗಳನ್ನು ನಿರೀಕ್ಷಿಸಲಾಗಿದೆ.

ಕಲಬುರಗಿ ಜಿಲ್ಲೆಯ ಆಳಂದದ ವಿವಾದಿತ ಲಾಡ್ಲೆ ಮಶಾಕ್ ದರ್ಗಾ ಗಲಭೆಗೆ ಸಂಬಂಧಿಸಿದ 13 ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯಲು ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರ ಮೇ 22ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅಧಿಕೃತ ಒಪ್ಪಿಗೆ ನೀಡಿತ್ತು. ಆಗ ವಿಧಾನಸಭಾ ಸಭಾಧ್ಯಕ್ಷರಾಗಿದ್ದ ಯು.ಟಿ. ಖಾದರ್ ಅವರ ಲಿಖಿತ ಶಿಫಾರಸಿನ ಮೇರೆಗೆ ಸರ್ಕಾರ ಈ ನಿರ್ಧಾರ ಕೈಗೊಂಡಿತ್ತು.

## ಸಿ.ಟಿ. ರವಿ ನನ್ನ ಬಾಸ್ ಎಂದ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ನಡೆದ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಮ್ಮ ಭಾಷಣದ ವೇಳೆ ವಿಧಾನ ಪರಿಷತ್ ಬಿಜೆಪಿ ಸದಸ್ಯ ಸಿ.ಟಿ.ರವಿ ಅವರನ್ನು ತಮ್ಮ ಬಾಸ್ ಎಂದು ಹೇಳಿರುವ ವಿಡಿಯೋ ವೈರಲ್ ಆಗಿದೆ. ತಮಿಳುನಾಡು ಉಸ್ತುವಾರಿಯಾಗಿ ಸಿ.ಟಿ. ರವಿ ಅವರು ಕಾರ್ಯನಿರ್ವಹಿಸುತ್ತಿದ್ದ ವೇಳೆ ಅವರ ಜೊತೆ ತಾನು ಕೆಲಸ ಮಾಡಿದ್ದೆ. ಹಿಂದೆಯೋ ಅಥವಾ ಈಗಲೋ ಅದು ಲೆಕ್ಕವಲ್ಲ, ಅವರು ನನ್ನ ಬಾಸ್, ಆದರೆ ಬಾಸ್ ಯಾವಾಗಲೂ ಬಾಸ್ ಎಂದು ಹೇಳುವ ಮೂಲಕ ಅವರು ಸರಳತೆ ಮೆರೆದಿದ್ದರು.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ವಿ. ಸೋಮಣ್ಣ, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮೊದಲಾದವರು ಉಪಸ್ಥಿತರಿದ್ದರು.

## ಗಣಿ ಹಾಗೂ ಗೃಹ ಇಲಾಖೆ ತನಿಖೆ ನಡೆಸುತ್ತಿವೆ: ಪ್ರಿಯಾಂಕ್ ಖರ್ಗೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ತಾಲ್ಲೂಕಿನ ಮಡಪಟ್ಟಣದಲ್ಲಿರುವ ಕಲ್ಲುಕ್ವಾರಿಯಲ್ಲಿ ಸಂಭವಿಸಿದ ಕುಸಿತ ದುರಂತದಲ್ಲಿ ಸುಮಾರು ಎಂಟು ಮಂದಿ ಮೃತಪಟ್ಟಿರುವ ಶಂಕೆಯಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಗೃಹ ಇಲಾಖೆಯ ಅಧಿಕಾರಿಗಳು ಸ್ಥಳದಲ್ಲಿದ್ದು ಪರಿಸ್ಥಿತಿಯನ್ನು ಪರಿಶೀಲಿಸುತ್ತಿದ್ದಾರೆ. ಈ ದುರಂತದಲ್ಲಿ ಎಂಟು ಮಂದಿ ಮೃತಪಟ್ಟಿರುವಂತೆ ತೋರುತ್ತಿದೆ. ಅವರಲ್ಲಿ ಹೆಚ್ಚಿನವರು ಇತರೆ ರಾಜ್ಯದವರಾಗಿದ್ದು, ಒಬ್ಬರು ನಮ್ಮ ರಾಜ್ಯದವರು. ವಿವರವಾದ ವರದಿಗಾಗಿ ನಾವು ಕಾಯುತ್ತಿದ್ದೇವೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ ಪರಿಸ್ಥಿತಿಯನ್ನು ಮೌಲ್ಯಮಾಪನ ಮಾಡುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಪ್ರಾಥಮಿಕವಾಗಿ ಇದು ನಿರ್ಲಕ್ಷ್ಯದಿಂದ ಸಂಭವಿಸಿದಂತೆ ಕಾಣುತ್ತಿದೆ. ಗಣಿ ಹಾಗೂ ಗೃಹ ಇಲಾಖೆ ತನಿಖೆ ನಡೆಸುತ್ತಿವೆ ಎಂದರು.

# ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ

## ರಾಷ್ಟ್ರೀಯ ವೈದ್ಯರ ದಿನಾಚರಣೆ ಮತ್ತು ಸಾಧಕ ಪಾಲಿಕೆ ವೈದ್ಯರುಗಳಿಗೆ ಧನ್ವಂತರಿ ಪ್ರಶಸ್ತಿ ಪ್ರಧಾನ ಸಮಾರಂಭ

• ಉದಯವಾಹಿನಿ, ಬೆಂಗಳೂರು

ಜಿಬಿಎ ನೌಕರರ ಭವನ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆ ಮತ್ತು ಪಾಲಿಕೆಯಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಆರೋಗ್ಯಧಿಕಾರಿಗಳು,ಅಧಿಕ್ಷಕರು, ಆರೋಗ್ಯ ವೈದ್ಯಾಧಿಕಾರಿ, ವೈದ್ಯರಿಗೆ ಧನ್ವಂತರಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಮುಖ್ಯ ಆಯುಕ್ತರಾದ ಎಂ.ಮಹೇಶ್ವರರಾವ್ ರವರು, ಆಯುಕ್ತರಾದ ಜಿ.ಜಗದೀಶ್‌ರವರು, ವಿಶೇಷ ಆಯುಕ್ತರಾದ ಡಾ.ಆರ್.ವೆಂಕಟಚಲಪತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ, ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ಮುಖ್ಯ ಆರೋಗ್ಯಧಿಕಾರಿಗಳಾದ ಡಾ.ಸೈಯದ್ ಸಿರಾಜುದ್ದೀನ್ ಮದನಿ, ಡಾ.ನಿರ್ಮಲ ಬುಗ್ಗಿ, ಆರೋಗ್ಯಧಿಕಾರಿಗಳಾದ ಡಾ.ಎಂ.ಶಿವಕುಮಾರ್, ಡಾ.ಸಿದ್ದಪ್ಪಾಜಿರವರು ದೀಪ ಬೆಳಗಿಸಿ, ಡಾ. ಬಿಧಾನ್ ಚಂದ್ರರಾಯ್‌ರವರ ಬಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಪ್ರಶಸ್ತಿ ಪ್ರಧಾನ ಮಾಡಿದರು.



ಉದಯವಾಹಿನಿ ಚಿತ್ರ

### ರಾಷ್ಟ್ರೀಯ ವೈದ್ಯರ ದಿನಾಚರಣೆ

ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬೇಕು. ಜನನ ಪ್ರಮಾಣ ಉತ್ತಮವಾಗಿರಬೇಕು, ಮರಣ ಪ್ರಮಾಣ ಕಡಿಮೆಯಾಗಬೇಕು ಎಂದರೆ ವೈದ್ಯಕೀಯ ವ್ಯವಸ್ಥೆ ಸಮರ್ಪಕವಾಗಿ ಇರಬೇಕು ಮತ್ತು ಆಹಾರ ಪದ್ಧತಿ ಹಾಗೂ ಆಧುನಿಕ ಔಷಧಿಗಳ ಶೋಧನೆಯಾಗಬೇಕು.
ಎಂ.ಮಹೇಶ್ವರರಾವ್ ಮುಖ್ಯ ಆಯುಕ್ತ

ಡಾ.ಬಿಧಾನ್ ಚಂದ್ರರಾಯ್ ರವರ ಸವಿನೆಪಿನಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಚರಿಸಲಾಗುತ್ತಿದೆ. ಪ್ರಾಣದ ಪಣಕ್ಕಿಟ್ಟ ಕೊವಿಡ್ ಸಂದರ್ಭದಲ್ಲಿ ವೈದ್ಯರು ತುಂಬಾ ಒಳ್ಳೆಯ ಕೆಲಸ ಮಾಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಆಸ್ಪತ್ರೆಗಳನ್ನು ಹೈಟೆಕ್ ಆಸ್ಪತ್ರೆಗಳಾಗಿ ಮಾಡಲು ತಮ್ಮೆಲ್ಲರ ಸಹಕಾರ ಕೊಡಿ ಎಂದು ಹೇಳಿದರು.
ಜಿ.ಜಗದೀಶ್ ಆಯುಕ್ತ

ವೈದ್ಯರು ದೇವರು ಇದ್ದಂತೆ. ಕೊವಿಡ್ ಸಂದರ್ಭದಲ್ಲಿ ವೈದ್ಯರು ಜೀವನ ಹಂಗು ತೊರೆದು ಕೆಲಸ ಮಾಡಿದರು ಅವರ ಜೊತೆಯಲ್ಲಿ ಕಾರ್ಯನಿರ್ವಹಿಸುವ ಸೌಭಾಗ್ಯ ನನ್ನದಾಗಿತ್ತು. ವೆಂಕಟಚಲಪತಿ ವಿಶೇಷ ಆಯುಕ್ತ

ಕೆ.ಷಡಕ್ಷರಿ ವೈದ್ಯರಿಗೆ ಸಮಸ್ಯೆ, ಸಂಕಷ್ಟಗಳಿಗೆ ನೆರವು ನೀಡಲು ಜಿಬಿಎ-ಪಾಲಿಕೆಗಳ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘ ಶ್ರಮಿಸುತ್ತಿದೆ. ಪಹಲ್ಗಾಮ್‌ನಲ್ಲಿ ಕನ್ನಡ ರಾಜ್ಯೋತ್ಸವ ಮಾಡಿ ಇಡೀ ರಾಜ್ಯವೇ ಪಾಲಿಕೆ ಸಂಘದ ಕಡೆ ನೋಡುವಂತಾಯಿತು.

ವೈದ್ಯರನ್ನ ದೇವರಂತೆ ಕಾಣು ಎಂಬ ಗಾದೆ ಮಾತು ಇದೆ .ಅದರಂತೆ ಕಾಯಕ ತತ್ವದಲ್ಲಿ ವೈದ್ಯರು ಕೆಲಸ ಮಾಡಬೇಕು, ತಮ್ಮ ಮೇಲೆ ಹೆಚ್ಚು ಜವಾಬ್ದಾರಿ ಇದೆ. ಪ್ರಶಸ್ತಿಗಳು ಬರುವುದು ಇನ್ನು ಹೆಚ್ಚು ಸೇವೆ ಮಾಡುವಂತೆ ಸ್ಫೂರ್ತಿ, ಪ್ರೇರಣೆ ನೀಡುತ್ತದೆ ಎಂದು ಹೇಳಿದರು.

ಮೊದಲ ಬಾರಿಗೆ ಪಂಚ ಪಾಲಿಕೆ ವೈದ್ಯರು, ವೈದ್ಯಾಧಿಕಾರಿಗಳಿಗೆ ರಾಷ್ಟ್ರೀಯ ವೈದರ ದಿನಾಚರಣೆ ಪ್ರಯುಕ್ತ ಸನ್ಮಾನಿಸಲಾಗುತ್ತಿದೆ. ಅಧಿಕಾರಿ ಮತ್ತು ನೌಕರರ ಆರೋಗ್ಯ ರಕ್ಷಣೆ ಒಳಾಂಗಣ ವ್ಯಾಯಮ ಕೇಂದ್ರ ಮತ್ತು ಊಟ, ತಿಂಡಿಗಾಗಿ ಕೇಂದ್ರ ಕಛೇರಿ ಅವರಣದಲ್ಲಿ ಹೈಟೆಕ್ ಕ್ಯಾಂಟೀನ್ ಆರಂಭಸಲಾಗುತ್ತಿದೆ. ಅಧಿಕಾರಿ ಮತ್ತು ನೌಕರರ ಆರೋಗ್ಯವಂತರಾಗಿ ಇದ್ದಾಗ ಹುಮಸ್ಸಿನಿಂದ ಕೆಲಸ ಮಾಡುತ್ತಾರೆ ಎಂದು ಹೇಳಿದರು.
ಅಧ್ಯಕ್ಷರಾದ ಎ.ಅಮೃತ್ ರಾಜ್


### ಧನ್ವಂತರಿ ಪ್ರಶಸ್ತಿ ಪುರಸ್ಕೃತರು

1) ಡಾ.ಮನೋರಂಜನ್ ಹೆಗ್ಡೆ, ಆರೋಗ್ಯಧಿಕಾರಿ
1)ಡಾ.ಲತಾ ಎಫ್ ಜೆ, ವೈದ್ಯಕೀಯ ಅಧೀಕ್ಷಕರು,
3)ಡಾ.ಟಿ.ವೆಂಕಟೇಶ್ , ಆರೋಗ್ಯ ವೈದ್ಯಾಧಿಕಾರಿ
4) ಡಾ.ಮಂಜುಳ ಡಿ., ವೈದ್ಯಕೀಯ ಅಧೀಕ್ಷಕರು.
5) ಡಾ.ಕೋಮಲ ಕೆ.ಆರ್., ಆರೋಗ್ಯ ವೈದ್ಯಾಧಿಕಾರಿ
6) ಡಾ.ಲಲಿತಾ, ವೈದ್ಯಕೀಯ ಅಧೀಕ್ಷಕರು
7)ಡಾ.ಮಂಜುಳ ಡಿ, ಆರೋಗ್ಯ ವೈದ್ಯಾಧಿಕಾರಿ
8) ಡಾ.ಭಾರತಿ ಜೆ.ಪಿ.ವೈದ್ಯಕೀಯ ಅಧೀಕ್ಷಕರು.
9) ಡಾ.ನವೀನ್ ಕುಮಾರ್ , ವೈದ್ಯಾಧಿಕಾರಿ
10) ಡಾ.ರಾಜೇಶ್ ಎನ್, ವೈದ್ಯಾಧಿಕಾರಿ
11)ಡಾ.ಅನುಪಮಾ ಜಿ.ವೈದ್ಯಾಧಿಕಾರಿ
12) ಡಾ.ಅನುಪಮಾ ಸಿ.ವಿ ಅರವಳಿಕೆ ತಜ್ಞರು.
13) ಡಾ.ಸುಜಾತ, ನಗರ ಆರೋಗ್ಯ ಪ್ರಾಥಮಿಕ ಕೇಂದ್ರ.
14) ಡಾ.ವಿ.ಜಿ.ನವೀನ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ



## ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು 8 ಕಾರ್ಮಿಕರ ಸಾವು ಅಪರಾಧ ಕೃತ್ಯ : ಶಾಸಕ ಖ ಖಿ ಸೋಮಶೇಖರ್

• ಉದಯವಾಹಿನಿ, ಬೆಂಗಳೂರ


ಉದಯವಾಹಿನಿ ಚಿತ್ರ

ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು ಬಿಹಾರ ಮೂಲದ 8 ಮಂದಿ ಕಾರ್ಮಿಕರು ಸಾವಿಗೀಡಾಗಿರುವ ಘಟನೆ ಬಗ್ಗೆ ಸ್ಥಳೀಯ ಶಾಸಕ ಎಸ್‌ಟಿ ಸೋಮಶೇಖರ್ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ವಾರಿ ಕುಸಿತ ಪ್ರಕರಣವು ಕೇವಲ ನಿರ್ಲಕ್ಷ್ಯದ ಪರಿಣಾಮವಲ್ಲ, ಅಪರಾಧ ಕೃತ್ಯ ಎಂದು ಆರೋಪಿಸಿದರು. ಅಕ್ರಮ ಕ್ವಾರಿ ಕಾರ್ಯಾಚರಣೆಗೆ ಭೂವಿಜ್ಞಾನ ಇಲಾಖೆ ಹಾಗೂ ಸ್ಥಳೀಯ ಪೊಲೀಸರು ಸಹಕಾರ ನೀಡಿರುವ ಆರೋಪವನ್ನೂ ಅವರು ಮಾಡಿದರು.

ಈ ಹಿಂದೆ ಅಕ್ರಮ ಕ್ವಾರಿ ಚಟುವಟಿಕೆಗಳನ್ನು ತಡೆಯುವಂತೆ ಮುಖ್ಯಮಂತ್ರಿ ಹಾಗೂ ಹಿರಿಯ ಅಧಿಕಾರಿಗಳ ಗಮನಕ್ಕೆ ಈ ವಿಷಯವನ್ನು ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ ಎಂದು ಅವರು ಹೇಳಿದರು.

ಘಟನೆಯಲ್ಲಿ ಏಳು ಮಂದಿ ಕಾರ್ಮಿಕರು ಮೃತಪಟ್ಟಿದ್ದು, ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂಬ ಮಾಹಿತಿ ತಮಗೆ ಲಭಿಸಿದೆ ಎಂದು ತಿಳಿಸಿದ ಸೋಮಶೇಖರ್, ಅಪಘಾತ ಸ್ಥಳಕ್ಕೆ ಭೇಟಿ ನೀಡುವ ನಿರೀಕ್ಷೆಯಿರುವ ಮುಖ್ಯಮಂತ್ರಿಗಳೊಂದಿಗೆ ಈ ವಿಷಯವನ್ನು ಗಂಭೀರವಾಗಿ ಪ್ರಸ್ತಾಪಿಸುವುದಾಗಿ ಹೇಳಿದರು.

ಇನ್ನು ಘಟನೆ ಬಗ್ಗೆ ಪ್ರತಿಕ್ರಿಯಿಸಿರುವ ಹಿರಿಯ ಭೂ ವಿಜ್ಞಾನಿ ಕೃಷ್ಣವೇಣಿ, ಅನುಮತಿ ಪಡೆದೇ ಬಂಡೆ ಸ್ಫೋಟಿಸಿದ್ದಾರೆ. ಆದರೆ ಹೇಗೆ ದುರಂತ ಸಂಭವಿಸಿತು ಎಂದು ಕಾರಣ ಗೊತ್ತಿಲ್ಲ. ಸ್ಥಳ ಪರಿಶೀಲನೆ ಬಳಿಕ ಅವಘಡಕ್ಕೆ ಕಾರಣ ಗೊತ್ತಾಗಲಿದೆ ಎಂದವರು ತಿಳಿಸಿದ್ದಾರೆ.

ಮತ್ತೊಂದೆಡೆ ದುರಂತ ಸ್ಥಳದಲ್ಲಿ ಮೃತಪಟ್ಟವರ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿದೆ. ಹೊಟ್ಟೆಪಾಡಿಗಾಗಿ ಒಂದು ಊರಿನಿಂದ ಮತ್ತೊಂದು ಊರಿಗೆ ಬಂದಿದ್ದೇವೆ. ಕಳೆದ ಒಂದು ವರ್ಷದಿಂದ ಇಲ್ಲಿಗೆ ಬಂದು ಕೆಲಸ ಮಾಡಿ ಜೀವನ ನಡೆಸುತ್ತಿದ್ದೇವೆ ಎಂದು ಅತ್ತುಕೊಂಡು ಹೇಳುತ್ತಿದ್ದಾರೆ.

10 ಕಾರ್ಮಿಕರ ಪೈಕಿ 8 ಮಂದಿ ದುರಂತದಲ್ಲಿ ಮೃತಪಟ್ಟಿರುವ ಮಾಹಿತಿ ಇದೆ. ಈ ಹಿಂದೆಯೇ ಎಚ್ಚೆತ್ತುಕೊಳ್ಳಿ ಎಂದು ಹೇಳಿದ್ದೆ. ಘಟನೆ ಸಂಬಂಧ ಸ್ಥಳೀಯ ಪೊಲೀಸರು, ಅರಣ್ಯ ಇಲಾಖೆ ವಿರುದ್ಧ ಕೇಸ್ ದಾಖಲಾಗಬೇಕು. ಘಟನೆ ಕಾರಣರಾದವರನ್ನು ಕೂಡಲೇ ಬಂಧಿಸಬೇಕು ಎಂದು ಆಗ್ರಹಿಸಿದ್ದಾರೆ.
-ಶಾಸಕ ಎಸ್‌ಟಿ. ಸೋಮಶೇಖರ್

## ರೇಣುಕಾಸ್ವಾಮಿ ಕೊಲೆ ಪ್ರಕರಣ; ಪ್ರಮುಖ ಸಾಕ್ಷಿಗಳಿಗೆ ಬೆದರಿಕೆ- ಮೂವರ ಬಂಧನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರೇಣುಕಾಸ್ವಾಮಿ ಕೊಲೆ ಪ್ರಕರಣದ ಪ್ರಮುಖ ಸಾಕ್ಷಿ ಸಂದೀಪ್‌ಗೆ ಬೆದರಿಕೆ ಹಾಕಿದ್ದ ಆರೋಪದ ಮೇಲೆ ಮೂವರು ಆರೋಪಿಗಳನ್ನ ಕಾಮಾಕ್ಷಿಪಾಳ್ಯ ಪೊಲೀಸರು ಬಂಧಿಸಿದ್ದಾರೆ.

ದರ್ಶನ್ ಅಭಿಮಾನಿಗಳಾದ ಸುಹಾಸ್, ವೇಣು ಮತ್ತು ಪುನೀತ್ ಬಂಧಿತ ಆರೋಪಿಗಳಾಗಿದ್ದು, ಮೂವರು ಮೂಲತಃ ತುಮಕೂರಿನವರು. ಪುನೀತ್ ಡಿ-ಕಮ್ಯುನಿಟಿ ಫೇಸ್‌ಬುಕ್ ಪೇಜ್‌ನ ಅಡ್ಮಿನ್ ಎಂಬ ವಿಷಯ ಬೆಳಕಿಗೆ ಬಂದಿದೆ.

ಸಾಕ್ಷ್ಯನಾಶಕ್ಕೆ ಸಂಚು ರೂಪಿಸಿದ ಈ ಅಭಿಮಾನಿಗಳ ಕೃತ್ಯದಿಂದ ನಟ ದರ್ಶನ್ ಅಂಡ್ ಗ್ಯಾಂಗ್‌ಗೆ ಕಾನೂನು ಸಂಕಷ್ಟ ಮತ್ತು ಜೈಲು ವಾಸದ ಭೀತಿ ಇನ್ನಷ್ಟು ಹೆಚ್ಚಾಗಿದೆ. ಎಂ.ಆರ್ ಪುನೀತ್ ರೇಣುಕಾಸ್ವಾಮಿ ಕೊಲೆ ಪ್ರಕರಣದ ಪ್ರಮುಖ ಸಾಕ್ಷಿದಾರನಾಗಿದ್ದಾನೆ. ರೇಣುಕಾಸ್ವಾಮಿ ಶವ ಬಿಸಾಡಲು ಮತ್ತೊಬ್ಬ ಸಾಕ್ಷಿ ಸಂದೀಪ್‌ಗೆ ಸ್ಕಾರ್ಪಿಯೋ ಕಾರು ಕೊಟ್ಟಿದ್ದೇ ಈ ಪುನೀತ್. ಶವ ಬಿಸಾಡಿದ ಬಳಿಕ ಕಾರನ್ನ ತೊಳೆಸಿದ್ದ. ಆ ಕಾರನ್ನ ದರ್ಶನ್‌ಗೆ ನೀಡಿದ್ದಾಗಿ, ಬಳಿಕ ರಕ್ತದ ಕಲೆ ತೊಳಿಸಿದ್ದಾಗಿಯೂ ಹೇಳಿಕೆ ನೀಡಿದ್ದ.

ಹಾಗಾಗಿ ಚಿತ್ರದುರ್ಗದಿಂದ ರೇಣುಕಾಸ್ವಾಮಿಯನ್ನ ಕರೆತಂದಿಲ್ಲ ಎಂದು ಹೇಳುವಂತೆ ಪುನೀತ್, ಸಂದೀಪ್‌ಗೆ ಒತ್ತಡ ಹೇರಿದ್ದ. ಈ ಬಗ್ಗೆ ಕೋರ್ಟ್‌ಗೆ ಸಂದೀಪ್ ಪ್ರಮಾಣ ಪತ್ರ ಸಲ್ಲಿಸಿದ್ದ. ಸಾಕ್ಷಿಗೆ ಬೆದರಿಕೆ ಹಾಕಿದ ಆರೋಪದ ಮೇಲೆ ಎಫ್‌ಐಆರ್ ದಾಖಲಿಸಿದ್ದ ಕಾಮಾಕ್ಷಿಪಾಳ್ಯ ಪೊಲೀಸರು ಮೂವರನ್ನ ಬಂಧಿಸಿದ್ದಾರೆ.

## ತಪ್ಪಿಸಿಕೊಳ್ಳಲು ಯತ್ನಿಸಿದ ರೌಡಿಶೀಟರ್ ಕಾಲಿಗೆ ಗುಂಡೇಟು

• ಉದಯವಾಹಿನಿ, ಬೆಂಗಳೂರು

ಕೊಲೆ ಪ್ರಕರಣದಲ್ಲಿ ಬಂಧಿಸಿ ಸ್ಥಳ ಮಹಜರಿಗೆ ಕರೆದೊಯ್ದ ವೇಳೆ ಪೊಲೀಸರ ಮೇಲೆಯೇ ಕಲ್ಲು ತೂರಾಟ ನಡೆಸಿ ಪರಾರಿಯಾಗಲು ಯತ್ನಿಸಿದ್ದ ಆರೋಪಿಯ ಕಾಲಿಗೆ ಜೆ.ಪಿ.ನಗರ ಠಾಣೆಯ ಪೊಲೀಸರು ಗುಂಡು ಹಾರಿಸಿ ಮತ್ತೆ ಬಂಧಿಸಿದ್ದಾರೆ. ರೌಡಿಶೀಟರ್ ಸಂತೋಷ್ ಕುಮಾರ್ ಗುಂಡೇಟು ತಿಂದ ಆರೋಪಿ. ತಲಘಟ್ಟಪುರದ ಹೆಮ್ಮಿಗೆಪುರದಲ್ಲಿ ಬುಧವಾರ ಘಟನೆ ನಡೆದಿದೆ. ಸಂತೋಷ್ ವಿರುದ್ಧ ಎರಡು ಕೊಲೆ ಹಾಗೂ ಐದು ಕೊಲೆ ಯತ್ನ ಪ್ರಕರಣಗಳೂ ಸೇರಿ 14 ಪ್ರಕರಣಗಳು ದಾಖಲಾಗಿವೆ. ಜೂ 27ರಂದು ಸಂತೋಷ್ ತನ್ನ ಸಹಚರರ ಜತೆಗೆ ಸೇರಿ ರೌಡಿಶೀಟರ್ ರಾಜು ಕೊಲೆ ಮಾಡಿದ್ದ. ಅದೇ ದಿನ ರಾತ್ರಿ ಕೆ.ಆರ್.ಪುರ ಠಾಣೆ ವ್ಯಾಪ್ತಿಯಲ್ಲಿ ಖಾರದಪುಡಿ ಎರಚಿ, ಸರ ಕಳವು ಮಾಡಿ ಪರಾರಿಯಾಗಿದ್ದ ಎಂದು ಪೊಲೀಸರು ಹೇಳಿದರು.

ಕೊಲೆ ಪ್ರಕರಣದ ಸಂಬಂಧ ಸಂತೋಷ್ ಸೇರಿ ನಾಲ್ವರನ್ನು ಜೆ.ಪಿ.ನಗರ ಠಾಣೆ ಪೊಲೀಸರು ಇತ್ತೀಚೆಗೆ ಬಂಧಿಸಿದ್ದರು. ಮಾರಕಾಸ್ತ್ರ ಇಟ್ಟಿದ್ದ ಸ್ಥಳ ಸಂಚು ರೂಪಿಸಿದ್ದ ತಲಘಟ್ಟಪುರದ ಹೆಮ್ಮಿಗೆಪುರದಲ್ಲಿ ಸ್ಥಳ ಮಹಜರು ಮಾಡಲು ಪಿಎಸ್‌ಐ ತಂಡ ಕರೆದೊಯ್ದಿತ್ತು.

# ಪಾದಚಾರಿ ಮಾರ್ಗ ಒತ್ತುವರಿ ತೆರವು ಆರಂಭ

## ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತಿದ್ದ ಎಲ್ಲಾ ರೀತಿಯ ಅತಿಕ್ರಮಣಗಳನ್ನು ಅಧಿಕಾರಿಗಳು ತೆರವು

• ಉದಯವಾಹಿನಿ, ಬೆಂಗಳೂರ

ನಗರದ ಪಾದಚಾರಿ ಮಾರ್ಗಗಳನ್ನು ಒತ್ತುವರಿರಹಿತಗೊಳಿಸಿ ನಾಗರಿಕರಿಗೆ ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಬುಧವಾರದಿಂದ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಆರಂಭಗೊಳಿಸಿದೆ.

ಇದಕ್ಕೆ ತೀವ್ರ ಪ್ರತಿರೋಧ ವ್ಯಕ್ತವಾಗಿದೆ. ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನದ ಅಂಗವಾಗಿ ನಗರದ ಪ್ರಮುಖ ಆರ್ಟಿರಿಯಲ್ ಹಾಗೂ ಸಬ್-ಆರ್ಟಿರಿಯಲ್ ರಸ್ತೆಗಳಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದ್ದು, ಸಾರ್ವಜನಿಕರ ಓಡಾಟಕ್ಕೆ ಅಡ್ಡಿಯಾಗಿದ್ದ ವಿವಿಧ ರೀತಿಯ ಅತಿಕ್ರಮಣಗಳನ್ನು ತೆರವುಗೊಳಿಸಲಾಗಿದೆ.

ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾ ಚರಣೆಯಲ್ಲಿ ಪಾಲಿಕೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪೊಲೀಸರು ಭಾಗವಹಿಸಿದ್ದರು.

ಜೆಸಿಬಿ, ಟ್ರ್ಯಾಕ್ಟರ್ ಸೇರಿದಂತೆ ವಿವಿಧ ವಾಹನಗಳ ಸಹಾಯದಿಂದ ಪಾದಚಾರಿ ಮಾರ್ಗಗಳ ಮೇಲೆ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಚನೆಗಳನ್ನು ತೆರವುಗೊಳಿಸಲಾಯಿತು. ನಗರದ ಅನೇಕ ಪ್ರದೇಶಗಳಲ್ಲಿ ಅಂಗಡಿಗಳ ಮುಂಭಾಗ ನಿರ್ಮಿಸಲಾಗಿದ್ದ ಮೆಟ್ಟಿಲುಗಳು, ನಾಮಫಲಕಗಳು, ಕಬ್ಬಿಣದ ಶೆಡ್‌ಗಳು, ತಳ್ಳುಗಾಡಿಗಳು, ಕಟ್ಟಡ ತ್ಯಾಜ್ಯ, ಶಾಶ್ವತ ಹಾಗೂ ತಾತ್ಕಾಲಿಕ ಪೆಟ್ಟಿಗೆ ಗಳು, ಓಎಫ್‌ಸಿ ಕೇಬಲ್‌ಗಳ ಅಡ್ಡಿಗಳು ಸೇರಿದಂತೆ ಪಾದಚಾರಿಗಳ ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತಿದ್ದ ಎಲ್ಲಾ ರೀತಿಯ ಅತಿಕ್ರಮಣಗಳನ್ನು ಅಧಿಕಾರಿಗಳು ತೆರವುಗೊಳಿಸಿದರು.


ಉದಯವಾಹಿನಿ ಚಿತ್ರ

ಪಾದಚಾರಿ ಮಾರ್ಗಗಳು ಸಾರ್ವಜನಿಕ ಆಸ್ತಿಯಾಗಿದ್ದು, ಅವುಗಳ ಮೇಲೆ ಖಾಸಗಿ ಸ್ವಾಧೀನ ಅಥವಾ ಅನಧಿಕೃತ ಬಳಕೆ ನಾಗರಿಕರ ಹಕ್ಕಿಗೆ ಧಕ್ಕೆ ತರುತ್ತದೆ ಎಂಬುದು ಅಧಿಕಾರಿಗಳ ಅಭಿಪ್ರಾಯವಾಗಿದೆ. ಬೆಂಗಳೂರು ಪೂರ್ವ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಮಾರತಹಳ್ಳಿ-ಇಬ್ಲೂರು ಜಂಕ್ಷನ್, ವರ್ತೂರು ರಸ್ತೆ, ಐಟಿಪಿಎಲ್ ಮುಖ್ಯ ರಸ್ತೆ, ಹೊರ ವರ್ತುಲ ರಸ್ತೆ, ಟಿನ್ ಫ್ಯಾಕ್ಟರಿ, ರಾಮಮೂರ್ತಿನಗರ, ಕುಂದಲಹಳ್ಳಿ ಹಾಗೂ ಹೂಡಿ ರಸ್ತೆಗಳಲ್ಲಿ ಕಾರ್ಯಾಚರಣೆ ನಡೆಸಲಾಯಿತು. ಆಯುಕ್ತ ರಮೇಶ್ ಡಿ. ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಹಲವು ಅತಿಕ್ರಮಣಗಳನ್ನು ತೆರವುಗೊಳಿಸಲಾಯಿತು.

ಟ್ರಿನಿಟಿ ಜಂಕ್ಷನ್‌ನಿಂದ ಎಂಜಿ ಉದ್ಯಾನ, ಇಂದಿರಾನಗರ, ದೊಮ್ಮಲೂರು, ವಿವೇಕಾನಂದ ಮೆಟ್ರೋ ನಿಲ್ದಾಣ, ಬೆನ್ನಿಗಾನಹಳ್ಳಿ, ಜಯನಗರ, ಸೌತ್ ಎಂಡ್ ಸರ್ಕಲ್, ಓಕಳೀಪುರಂ ಹಾಗೂ ಮೆಜೆಸ್ಟಿಕ್ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಯಿತು. ನಗರದ ಅತ್ಯಂತ ಜನನಿಬಿಡ ಪ್ರದೇಶಗಳಂದಾದ ಈ ಭಾಗಗಳಲ್ಲಿ ಪಾದಚಾರಿ ಮಾರ್ಗ ಮುಕ್ತಗೊಳಿಸುವುದರಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು. -ಆಯುಕ್ತ ಜಗದೀಶ್.ಜಿ

ಸಾರ್ವಜನಿಕರಿಂದ ಬರುವ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಿ ನಗರದ ಎಲ್ಲಾ ಭಾಗಗಳಲ್ಲಿಯೂ ಪಾದಚಾರಿ ಮಾರ್ಗ ಅತಿಕ್ರಮಣಮುಕ್ತಗೊಳಿಸುವ ಗುರಿ ಜಿಬಿಎ ಹೊಂದಿದೆ. ನಗರದ ಮೂಲಸೌಕರ್ಯ ಪಾದಚಾರಿ ಸ್ನೇಹಿಯಾಗಿ ರೂಪಿಸುವ ನಿಟ್ಟಿನಲ್ಲಿ ಈ ಕ್ರಮ ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದರು. -ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್

# ಆಲಮಟ್ಟಿ, ನಾರಾಯಣಪುರ ಜಲಾಶಯಗಳ ನೀರಿನ ಮಟ್ಟ ತೀರಾ ಕುಸಿತ!

## ಮಳೆಯ ಕೊರತೆಯೇ ನೀರಿನ ಮಟ್ಟ ಕುಸಿತಕ್ಕೆ ಕಾರಣ ಎಂದು ಅಧಿಕಾರಿಗಳು ಹೇಳಿದ್ದಾರೆ.


• **ಉದಯವಾಹಿನಿ ವಿಜಯಪುರ:**

ಉತ್ತರ ಕರ್ನಾಟಕದ ಐದು ಜಿಲ್ಲೆಗಳಲ್ಲಿ ಕುಡಿಯುವ ನೀರು ಮತ್ತು ನೀರಾವರಿಗೆ ಪ್ರಮುಖ ಜೀವನಾಡಿಯಾಗಿರುವ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿನ ನೀರಿನ

**1 : 123.081 ಟಿಎಂಸಿ ಅಡಿ ಒಟ್ಟು ಸಂಗ್ರಹ**
**2 : ನೀರಿನ ಸಮಸ್ಯೆ ಎದುರಾಗುವ ಭೀತಿ**
**3 : ಡೆಡ್ ಸ್ಟೋರೇಜ್ ಮಟ್ಟವನ್ನು ತಲುಪಿವೆ**

ಮಟ್ಟ ತೀವ್ರವಾಗಿ ಕುಸಿದಿದ್ದು, ಜುಲೈ ಅಂತ್ಯದ ವೇಳೆಗೆ ತೀವ್ರ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಭೀತಿ ಎದುರಾಗಿದೆ. ಕೃಷ್ಣಾ ನದಿ ಜಲಾನಯನ ಪ್ರದೇಶದಲ್ಲಿ ಮಳೆ ಕಡಿಮೆಯಾಗಿರುವುದರಿಂದ ವಿಜಯಪುರ, ಬಾಗಲಕೋಟೆ, ಯಾದಗಿರಿ, ಕಲಬುರಗಿ ಮತ್ತು ರಾಯಚೂರು ಜಿಲ್ಲೆಗಳಿಗೆ ನೀರು ಪೂರೈಸುವ ಜಲಾಶಯಗಳು ನೀರಿನ ಸಂಗ್ರಹ ಮಟ್ಟ ಕಡಿಮೆಯಾಗಿದೆ.

ಕಳೆದ ವರ್ಷ ಇದೇ ಅವಧಿಯಲ್ಲಿ, ಎರಡೂ ಜಲಾಶಯಗಳು ಅರ್ಧಕ್ಕಿಂತ ಹೆಚ್ಚು ತುಂಬಿದ್ದವು, ಮುನ್ನೆಚ್ಚರಿಕೆ ಕ್ರಮವಾಗಿ ಅಧಿಕಾರಿಗಳು ಲಕ್ಷಾಂತರ ಕ್ಯೂಸೆಕ್ ನೀರನ್ನು ಬಿಡುಗಡೆ


ಉದಯವಾಹಿನಿ ಚಿತ್ರ

ಮಾಡಿದರು.

ಈ ವರ್ಷ, ಜಲಾಶಯಗಳು ಯಾವುದೇ ಒಳಹರಿವು ಇಲ್ಲದೆ ಡೆಡ್ ಸ್ಟೋರೇಜ್ ಮಟ್ಟವನ್ನು ತಲುಪಿವೆ, ಇದು ಅಧಿಕಾರಿಗಳು ಮತ್ತು ನಿವಾಸಿಗಳಲ್ಲಿ ಕಳವಳವನ್ನುಂಟುಮಾಡಿದೆ. 123.081 ಟಿಎಂಸಿ ಅಡಿ ಒಟ್ಟು ಸಂಗ್ರಹ ಸಾಮರ್ಥ್ಯವನ್ನು ಹೊಂದಿರುವ ಆಲಮಟ್ಟಿ ಜಲಾಶಯವು ಪ್ರಸ್ತುತ ಕೇವಲ 123.081 ಟಿಎಂಸಿ ಅಡಿ ಒಟ್ಟು ಸಂಗ್ರಹ, ಅದರಲ್ಲಿ ಕೇವಲ 123.081 ಟಿಎಂಸಿ ಅಡಿ ಒಟ್ಟು ಸಂಗ್ರಹ. ಉಳಿದವು ಡೆಡ್ ಸ್ಟೋರೇಜ್ ಎಂದು ಪರಿಗಣಿಸಲಾಗಿದೆ.

ಕರ್ನಾಟಕದ ಕೃಷ್ಣಾ ಮೇಲ್ದಂಡೆ ಜಲಾನಯನ ಪ್ರದೇಶ ಮತ್ತು ಮಹಾರಾಷ್ಟ್ರದ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಮಳೆಯ ಕೊರತೆಯೇ ನೀರಿನ ಮಟ್ಟ ಕುಸಿತಕ್ಕೆ ಕಾರಣ ಎಂದು ಅಧಿಕಾರಿಗಳು ಹೇಳಿದ್ದಾರೆ.

> ಆಲಮಟ್ಟಿ ಜಲಾಶಯದಲ್ಲಿ ಈಗಿರುವ ನೀರಿನ ಸಂಗ್ರಹವು ಜುಲೈ ಅಂತ್ಯದವರೆಗೆ ಮಾತ್ರ ಕುಡಿಯುವ ನೀರಿನ ಅವಶ್ಯಕತೆಗಳನ್ನು ಪೂರೈಸಲು ಸಾಕಾಗುತ್ತದೆ. ಒಳಹರಿವು ಶೀಘ್ರದಲ್ಲೇ ಪ್ರಾರಂಭವಾಗದಿದ್ದರೆ, ಮುಂಬರುವ ವಾರಗಳಲ್ಲಿ ಈ ಪ್ರದೇಶವು ಸವಾಲಿನ ಪರಿಸ್ಥಿತಿಯನ್ನು ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.
> -ಮುಖ್ಯ ಎಂಜಿನಿಯರ್ ಡಿ. ಬಸವರಾಜ್

### ಕಟ್ಟುನಿಟ್ಟಿನ ನಿರ್ದೇಶನ

ಆಲಮಟ್ಟಿ ಮತ್ತು ನಾರಾಯಣಪುರ ಅಣೆಕಟ್ಟುಗಳಲ್ಲಿ ನೀರಿನ ಕೊರತೆಯಿಂದಾಗಿ, ನೀರನ್ನು ಕುಡಿಯುವ ಉದ್ದೇಶಗಳಿಗಾಗಿ ಮಾತ್ರ ಇಟ್ಟುಕೊಳ್ಳಲು ಮತ್ತು ನೀರಾವರಿಗಾಗಿ ಅಕ್ರಮವಾಗಿ ನೀರನ್ನು ಬಳಸಿಕೊಳ್ಳುತ್ತಿರುವ ಎಲ್ಲಾ ಪಂಪ್‌ಸೆಟ್‌ಗಳನ್ನು ತೆಗೆದುಹಾಕಲು ಸರ್ಕಾರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿದೆ.

ಒಂದು ತಿಂಗಳ ಹಿಂದೆ ನೈಋತ್ಯ ಮಾನ್ಸೂನ್ ಆರಂಭವಾದರೂ, ಆಲಮಟ್ಟಿ ಜಲಾಶಯಕ್ಕೆ ಒಳಹರಿವು ಬಹುತೇಕ ಶೂನ್ಯವಾಗಿದೆ. ಪ್ರಸ್ತುತ ಪರಿಸ್ಥಿತಿಯು 2016-17ರ ಬರಗಾಲದ ನೆನಪುಗಳನ್ನು ಸಹ ಪುನರುಜ್ಜೀವನಗೊಳಿಸಿದೆ, ಆಗ ಆಲಮಟ್ಟಿ ಜಲಾಶಯದ ಡೆಡ್ ಸ್ಟೋರೇಜ್‌ನಿಂದ ನೀರನ್ನು ಬಳಸಬೇಕಾಗಿತ್ತು, ಇದರ ಪರಿಣಾಮವಾಗಿ ಜಲಚರಗಳು ಸಾವನ್ನಪ್ಪಿದವು. ದೇಶೀಯ ಬಳಕೆಯ ಹೊರತಾಗಿ, ಜುಲೈನಲ್ಲಿ ಒಳಹರಿವು ಸುಧಾರಿಸದಿದ್ದರೆ ಎನ್‌ಟಿಪಿಸಿ ಸೇರಿದಂತೆ ಪ್ರಮುಖ ಕೈಗಾರಿಕಾ ಘಟಕಗಳು ಸಹ ನೀರಿನ ಕೊರತೆಯನ್ನು ಎದುರಿಸಬೇಕಾಗುತ್ತದೆ.

## ಎನ್‌ಪಿಎಸ್ ರದ್ದುಪಡಿಸಿ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಲು ಡಾ. ರವಿ ಸಿ.ಟಿ. ಆಗ್ರಹ

• **ಉದಯವಾಹಿನಿ ಚಿಕ್ಕಮಂಗಳೂರು :**


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್) ರದ್ದುಪಡಿಸಿ, ರಾಜ್ಯ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೊಳಿಸುವಂತೆ ವಿಧಾನ ಪರಿಷತ್ ಸದಸ್ಯ ಡಾ. ರವಿ ಸಿ.ಟಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

ಮುಖ್ಯಮಂತ್ರಿಗೆ ಬರೆದಿರುವ ಪತ್ರದಲ್ಲಿ, 2006ರ ಏಪ್ರಿಲ್ 1ರ ನಂತರ ಕರ್ನಾಟಕ ಸರ್ಕಾರಿ ಸೇವೆಗೆ ಸೇರ್ಪಡೆಯಾದ ನೌಕರರಿಗೆ ಜಾರಿಗೆ ತಂದಿರುವ ಎನ್‌ಪಿಎಸ್ ವ್ಯವಸ್ಥೆಯನ್ನು ರದ್ದುಪಡಿಸಿ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಮರುಸ್ಥಾಪಿಸಬೇಕೆಂದು ಒತ್ತಾಯಿಸಿದ್ದಾರೆ.

ಎನ್‌ಪಿಎಸ್ ವ್ಯಾಪ್ತಿಯ ಸರ್ಕಾರಿ ನೌಕರರು ಹಲವು ವರ್ಷಗಳಿಂದ ವಿವಿಧ ರೀತಿಯ ಹೋರಾಟಗಳ ಮೂಲಕ ಸರ್ಕಾರದ ಗಮನ ಸೆಳೆದಿದ್ದರೂ, ಇದುವರೆಗೆ ಹಳೆಯ ಪಿಂಚಣಿ ಯೋಜನೆ ಮರುಜಾರಿಗೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ನೌಕರರು ತಮ್ಮ ನಿವೃತ್ತಿ ಜೀವನವನ್ನು ಗೌರವಯುತವಾಗಿ ನಡೆಸಲು ಹಳೆಯ ಪಿಂಚಣಿ ಯೋಜನೆ ಅತ್ಯಗತ್ಯವಾಗಿದೆ. ಹೀಗಾಗಿ ಎನ್‌ಪಿಎಸ್ ಅನ್ನು ರದ್ದುಪಡಿಸಿ, ಆದಷ್ಟು ಶೀಘ್ರದಲ್ಲಿ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಮರುಸ್ಥಾಪಿಸುವ ಮೂಲಕ ಸರ್ಕಾರಿ ನೌಕರರ ಬಹುಕಾಲದ ಬೇಡಿಕೆಯನ್ನು ಈಡೇರಿಸಬೇಕು ಎಂದು ರವಿ ಮನವಿ ಮಾಡಿದ್ದಾರೆ.ರಾಜ್ಯದ ಸಮಸ್ತ ಎನ್‌ಪಿಎಸ್ ನೌಕರರ ಪರವಾಗಿ ಈ ಮನವಿಯನ್ನು ಸಲ್ಲಿಸುತ್ತಿದ್ದು, ನಿವೃತ್ತಿಯ ನಂತರ ನೌಕರರಿಗೆ ಆರ್ಥಿಕ ಭದ್ರತೆ ಹಾಗೂ ನೆಮ್ಮದಿಯ ಜೀವನ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ತ್ವರಿತ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಪತ್ರದಲ್ಲಿ ಒತ್ತಾಯಿಸಿದ್ದಾರೆ.

## ಟಿಪ್ಪರ್ ಕೃಷ್ಣಾ ನದಿಗೆ ಉರುಳಿ, ಚಾಲಕ ಸಿಲುಕಿರುವ ಶಂಕೆ ಒಬ್ಬರ ರಕ್ಷಣೆ

• **ಉದಯವಾಹಿನಿ ಕೊಲ್ಹಾರ:**

ವಿಜಯಪುರ ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ 52ರಲ್ಲಿ ಬುಧವಾರ ಸಾಯಂಕಾಲ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಟಿಪ್ಪರ್ ಒಂದು ಕೊಲ್ಹಾರ ಸೇತುವೆಯಿಂದ ಕೃಷ್ಣಾ ನದಿಗೆ ಉರುಳಿದ ಘಟನೆ ನಡೆದಿದೆ.


ಉದಯವಾಹಿನಿ ಚಿತ್ರ

ಬಾಗಲಕೋಟೆ ಜಿಲ್ಲೆಯ ಗದ್ದನಕೇರಿ ಕ್ರಾಸ್‌ನಿಂದ ಕೊಲ್ಹಾರದತ್ತ ಬರುತ್ತಿದ್ದ ಟಿಪ್ಪರ್, ಕಾರನ್ನು ಓವರ್‌ಟೇಕ್ ಮಾಡುವ ವೇಳೆ ಡಿಕ್ಕಿ ಹೊಡೆದು ನಿಯಂತ್ರಣ ತಪ್ಪಿ ಸೇತುವೆಯ ಮೇಲಿಂದ ನದಿಗೆ ಬಿದ್ದಿದೆ ಎಂದು ತಿಳಿದುಬಂದಿದೆ.

ಟಿಪ್ಪರ್ ಚಾಲಕ ಬಾಗಲಕೋಟೆ ಜಿಲ್ಲೆ ಬೆಣ್ಣೂರ ಗ್ರಾಮದ ಸಂತೋಷ ಕೋಟಿ ವಾಹನದೊಳಗೆ ಸಿಲುಕಿರುವ ಶಂಕೆ ವ್ಯಕ್ತವಾಗಿದ್ದು, ಇನ್ನೂ ಪತ್ತೆಯಾಗಿಲ್ಲ. ರಾತ್ರಿಯಾದ ಹಿನ್ನೆಲೆಯಲ್ಲಿ ಶೋಧ ಕಾರ್ಯವನ್ನು ತಾತ್ಕಾಲಿಕವಾಗಿ ನಿಲ್ಲಿಸಲಾಗಿದ್ದು, ಗುರುವಾರ ಕ್ರೇನ್ ಯಂತ್ರದ ಸಹಾಯದಿಂದ ಟಿಪ್ಪರ್ ಅನ್ನು ಹೊರತೆಗೆದು ಮುಂದಿನ ಕಾರ್ಯಾಚರಣೆ ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇನ್ನೊಂದೆಡೆ, ಟಿಪ್ಪರ್‌ನಲ್ಲಿದ್ದ ಬೀದರ್ ಜಿಲ್ಲೆಯ ಯರಣಗಿ ಗ್ರಾಮದ ನಿವಾಸಿ ಸಂಜು ಮೂಲಗೆ (28) ಅಪಘಾತದ ನಂತರ ನದಿಯಲ್ಲಿ ಮುಳುಗಿದ ಟಿಪ್ಪರ್ ಮೇಲೆಯೇ ಕುಳಿತುಕೊಂಡು ರಕ್ಷಣೆಗಾಗಿ ಮೊರೆ ಇಟ್ಟಿದ್ದು, ಸ್ಥಳೀಯ ಮೀನುಗಾರರು ತೆಪ್ಪದ ಮೂಲಕ ತೆರಳಿ ಅವರನ್ನು ಸುರಕ್ಷಿತವಾಗಿ ರಕ್ಷಿಸಿದ್ದಾರೆ.

ಘಟನಾ ಸ್ಥಳಕ್ಕೆ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಪರಿಶೀಲನೆ ನಡೆಸಿ ಶೋಧ ಕಾರ್ಯ ಕೈಗೊಂಡಿದ್ದಾರೆ. ಅಪಘಾತದ ಪರಿಣಾಮವಾಗಿ ಕೆಲಕಾಲ ಸೇತುವೆ ಮೇಲೆ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಬಳಿಕ ಬೀಳಗಿ ಮತ್ತು ಕೊಲ್ಹಾರ ಪೊಲೀಸರು ಅಪಘಾತಕ್ಕೀಡಾದ ಕಾರನ್ನು ತೆರವುಗೊಳಿಸಿ ಸಂಚಾರವನ್ನು ಸುಗಮಗೊಳಿಸಿದರು. ಈ ಘಟನೆಯು ಬಾಗಲಕೋಟೆ ಜಿಲ್ಲೆಯ ಬೀಳಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

## ಜಾಬ್ ಕಾರ್ಡ್ ಬದಲಿಗೆ ಗ್ಯಾರಂಟಿ ಕಾರ್ಡ್ ವಿತರಣೆ

• **ಉದಯವಾಹಿನಿ ಯಲಬುರ್ಗಾ :**

ಜನರಿಗೆ ಉದ್ಯೋಗ ಖಾತ್ರಿಯ ಜತೆಗೆ ಅಭಿವೃದ್ಧಿ ಖಾತ್ರಿ ಆಗಬೇಕು ಎಂಬುದು ವಿಬಿಜಿರಾಮ್ ಜಿ ಯೋಜನೆಯ ಮೂಲ ಉದ್ದೇಶವಾಗಿದೆ ಎಂದು ಸಂಪನ್ಮೂಲ ವ್ಯಕ್ತಿಗಳು ಹಾಗೂ ಕುಷ್ಟಗಿ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ನಿಂಗನಗೌಡ ತಿಳಿಸಿದರು.

ಇಂದು ಯಲಬುರ್ಗಾ ತಾಲ್ಲೂಕಾ ಪಂಚಾಯತ ಸಭಾಂಗಣದಲ್ಲಿ ಯಲಬುರ್ಗಾ/ ಕುಕನೂರ ತಾಲ್ಲೂಕು ಪಂಚಾಯತಿ ವತಿಯಿಂದ VB-G RAM G ಯೋಜನೆಯ ಅನುಷ್ಠಾನಿಸುವ ಕುರಿತಂತೆ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ಸಹಾಯಕ ನಿರ್ದೇಶಕರು(ಗ್ರಾ.ಉ) ತಾ.ಪಂ ಕುಷ್ಟಗಿ ರವರು ತರಬೇತಿ ನೀಡಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿ ಯೋಜನೆಯಂತೆಯೇ ವಿಬಿಜಿರಾಮ್ ಜಿ ಕೂಡ ಇದ್ದು, ಇದರಲ್ಲಿ ಬಹಳಷ್ಟು ಬದಲಾವಣೆ ಇಲ್ಲ. ಜಾಬ್ ಕಾರ್ಡ್ ಬದಲಿಗೆ ಗ್ಯಾರಂಟಿ ಕಾರ್ಡ್ ಬರಲಿದೆ. ಪ್ರತಿ ಮೂರು ವರ್ಷಕ್ಕೊಮ್ಮೆ ಬದಲಾವಣೆ ಅಗಲಿದೆ. ವಿಶೇಷ ಗ್ಯಾರಂಟಿ ಕಾರ್ಡ್ ಕೂಡ ವಿಶೇಷಚೇತನರು, ತೃತಿಯ ಲಿಂಗಿಗಳಿಗೆ ನೀಡಲಾಗುವುದು. ಇನ್ನು ಸಾಕಷ್ಟು ಬದಲಾವಣೆ ಆಗಲಿದೆ ಎಂದರು. ಸದರಿ ತರಬೇತಿಯಲ್ಲಿ ಜಿಲ್ಲಾ ಮತ್ತು ತಾಲ್ಲೂಕಾ ಮಟ್ಟದ ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಯಲಬುರ್ಗಾ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕರು(ಗ್ರಾ.ಉ) ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

ಕಾರಟಗಿ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ವನಜಾ ಮೆಡಮ್ ಅವರು ಮಾಹಿತಿ ನೀಡಿದರು. ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಂಶೀರ್ ಅಲಿ ಅವರು ವಿಬಿಜಿರಾಮ್ ಜಿ ಯೋಜನೆ 2047 ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರಾದ ನಿಂಗನಗೌಡ, ಆಡಳಿತಾಧಿಕಾರಿಗಳಾದ ಟಿ.ಜೆ ಧಾನಿ, ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ ಅಧಿಕಾರಿಗಳು, ಪಿಆರ್ ಇಡಿ ಇಲಾಖೆ ಅಧಿಕಾರಿಗಳು, ಯಲಬುರ್ಗಾ/ ಕುಕನೂರ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಯಲಬುರ್ಗಾ/ಕುಕನೂರ ತಾಲ್ಲೂಕಾ ಪಂಚಾಯತಿಯ ನರೇಗಾ ಸಿಬ್ಬಂದಿ, ತಾಂತ್ರಿಕ ಸಹಾಯಕರು (ಗ್ರಾಪಂಅನುಷ್ಠಾನ ಇಲಾಖೆ), ಕಂಪ್ಯೂಟರ್ ಆಪರೇಟರ್ ಗಳು, ಬಿಎಫ್ ಟಿ, ಜಿಕೆಎಂ ಹಾಜರಿದ್ದರು.

## ಮಳೆಗಾಲದಲ್ಲಿ ಸ್ವಚ್ಛತಾ ಕಾರ್ಯ ನಿರ್ಲಕ್ಷ್ಯ ಸಹಿಸುವುದಿಲ್ಲ

• **ಉದಯವಾಹಿನಿ ಕಮಲನಗರ**

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ವಿವಿಧ ಗ್ರಾಮಗಳಿಂದ ಸ್ವಚ್ಛತೆಯ ಕೊರತೆ, ಚರಂಡಿಗಳ ಅವ್ಯವಸ್ಥೆ, ಕಸ ವಿಲೇವಾರಿ ಸಮಸ್ಯೆ ಹಾಗೂ ಸಾಂಕ್ರಾಮಿಕ ರೋಗಗಳ ಹರಡುವಿಕೆಯ ಆತಂಕಕ್ಕೆ ಸಂಬಂಧಿಸಿದಂತೆ ಸಾಕಷ್ಟು ದೂರುಗಳು ಬರುತ್ತಿವೆ. ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಾರ್ವಜನಿಕರು ಅನಗತ್ಯ ತೊಂದರೆಗಳನ್ನು ಅನುಭವಿಸುತ್ತಿದ್ದು, ಇಂತಹ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಮಾಜಿ ಸಚಿವರು ಹಾಗೂ ಔರಾದ್(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಎಚ್ಚರಿಕೆ ನೀಡಿದ್ದಾರೆ. ಈ ಕುರಿತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಅವರು, ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಸ್ವಚ್ಛತಾ ಕಾರ್ಯಗಳು ಸಮರ್ಪಕವಾಗಿ ನಡೆಯದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಔರಾದ್ ಪಟ್ಟಣದ ವಿವಿಧ ವಾರ್ಡ್‌ಗಳು ಸೇರಿದಂತೆ ಹಲವೆಡೆ ಚರಂಡಿಗಳು ತುಂಬಿ ಕೊಳಚೆ ನೀರು ರಸ್ತೆ ಮೇಲೆ ಹರಿಯುತ್ತಿರುವ ಬಗ್ಗೆ ಸಾರ್ವಜನಿಕರಿಂದ ನಿರಂತರವಾಗಿ ದೂರುಗಳು ಬಂದಿವೆ. ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುವುದರ ಜೊತೆಗೆ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಹೆಚ್ಚಾಗಿದೆ. ಸಂಬಂಧಿತ ಅಧಿಕಾರಿಗಳು ಕೂಡಲೇ ಚರಂಡಿಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ, ಕಸ ವಿಲೇವಾರಿ, ನಿಂತ ನೀರಿನ ತೆರವು, ಬ್ಲೀಚಿಂಗ್ ಪೌಡರ್ ಸಿಂಪಡಣೆ, ಸೊಳ್ಳೆಗಳನ್ನು ನಿಯಂತ್ರಿಸಲು ಕ್ರಮ ವಹಿಸಬೇಕು ಎಂದಿದ್ದಾರೆ.

## ಎಸ್‌ಐಆರ್ ಕುರಿತು ಮತದಾರರಿಗೆ ಜಾಗೃತಿ ಮೂಡಿಸಿ

• **ಉದಯವಾಹಿನಿ ಯಾದಗಿರಿ:**


ಉದಯವಾಹಿನಿ ಚಿತ್ರ

ಅರ್ಹ ಮತದಾರರು ಯಾವುದೇ ಕಾರಣಕ್ಕೂ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಎಸ್‌ಐಆರ್ ಪ್ರಕ್ರಿಯೆ ಕುರಿತು ಮನೆಮನೆಗೆ ತೆರಳಿ ಸ್ಪಷ್ಟ ಹಾಗೂ ಮನಮುಟ್ಟುವ ರೀತಿಯಲ್ಲಿ ಮಾಹಿತಿ ನೀಡಬೇಕು ಎಂದು ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಮಹೇಶರೆಡ್ಡಿ ಮುದ್ನಾಳ ಕರೆ ನೀಡಿದರು.

ಎಸ್‌ಐಆರ್ ಪ್ರಕ್ರಿಯೆ ಹಿನ್ನೆಲೆಯಲ್ಲಿ ನಗರದ ವಾರ್ಡ್ ಸಂಖ್ಯೆ 6ರಿಂದ 11ರವರೆಗಿನ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿದ ಅವರು, ಬೂತ್ ಅಧ್ಯಕ್ಷರು, ಬಿಎಲ್‌ಎ-2 ಹಾಗೂ ಪಕ್ಷದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯಲ್ಲಿರುವ ಅರ್ಹರ ಹೆಸರುಗಳು ಯಾವುದೇ ಕಾರಣಕ್ಕೂ ಅಳಿಸಿಹೋಗದಂತೆ ವಿಶೇಷ ಕಾಳಜಿ ವಹಿಸಬೇಕು. ಪಕ್ಷದ ಬೆಂಬಲಿಗರು ಹಾಗೂ ಪ್ರಮುಖ ಮತದಾರರ ಹೆಸರುಗಳು ಅದೇ ಮತಗಟ್ಟೆಯಲ್ಲಿ ಯಥಾಸ್ಥಿತಿಯಲ್ಲಿ ಉಳಿಯುವಂತೆ ನಿರಂತರವಾಗಿ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆ ವೇಳೆ ಪ್ರತಿಯೊಬ್ಬ ಮತದಾರನಿಗೂ ಅಗತ್ಯ ದಾಖಲೆಗಳು, ಪರಿಶೀಲನಾ ವಿಧಾನ ಹಾಗೂ ಹೆಸರು ಪಟ್ಟಿಯಲ್ಲಿ ಉಳಿಸಿಕೊಳ್ಳುವ ಬಗ್ಗೆ ಸಮಗ್ರ ಮಾಹಿತಿ ನೀಡಿ ಜಾಗೃತಿ ಮೂಡಿಸುವಂತೆ ಅವರು ಕಾರ್ಯಕರ್ತರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ, ಪ್ರಧಾನ ಕಾರ್ಯದರ್ಶಿ ಪರಶುರಾಮ ಕುರುಕುಂದಿ, ಕರಣ್ ಸುಮ್ರು ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಶಿಸ್ತು, ಭಾವೈಕ್ಯ ಮೂಡಿಸುವ ಭಾರತ ಸೇವಾದಳ:ಪ್ರಭಾರ ಬಿಇಓ ನಡುಗಡ್ಡಿ

• **ಉದಯವಾಹಿನಿ ಇಂಡಿ:**

ಭಾರತ ಸೇವಾದಳವು ನಿಸ್ವಾರ್ಥ ಸೇವೆಗೆ ಹೆಸರಾಗಿದ್ದು, ದೇಶದ ಅಭಿವದ್ಧಿ ಕಾರ್ಯಗಳಲ್ಲಿ ತನ್ನನ್ನು ತೊಡಗಿಸಿಕೊಂಡಿದ್ದು, ಅದು ಶಿಸ್ತು, ಸಂಯಮ ಕಲಿಸುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಆರ್ ನಡುಗಡ್ಡಿ ಹೇಳಿದರು.

ಪಟ್ಟಣದ ಸರಕಾರಿ ನೌಕರರ ಸಂಘದ ಸಭಾಭವನದಲ್ಲಿ ಭಾರತ ಸೇವಾದಳ ಜಿಲ್ಲಾ ಸಮಿತಿ, ತಾಲ್ಲೂಕ ಸಮಿತಿ, ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಇಂಡಿ ವತಿಯಿಂದ ಹಮ್ಮಿಕೊಂಡ 'ತಾಲ್ಲೂಕ ಮಟ್ಟದ ಪುನಶ್ಚೇತನ ಶಿಬಿರ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸೇವಾದಳದ ಶಿಕ್ಷಕರು ಮಕ್ಕಳಲ್ಲಿ ರಾಷ್ಟ್ರಭಕ್ತಿ, ಶಿಸ್ತು, ದೇಶಪ್ರೇಮ, ಸೇವಾಮನೋಭಾವ ಮತ್ತು ನಾಯಕತ್ವ ಗುಣ ಬೆಳೆಸುವ ಮೂಲಕ ದೇಶವನ್ನು ಅಭಿವೃದ್ಧಿ ಪಡಿಸಬೇಕು ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಭಾರತ ಸೇವಾದಳ ಸ್ವಾತಂತ್ರ್ಯ ಹೋರಾಟಗಾರರು,ದೇಶಭಕ್ತರನ್ನು ಹುಟ್ಟು ಹಾಕಿದ ಸಂಸ್ಥೆ. ಸ್ವಾತಂತ್ರ್ಯ ಚಳುವಳಿಯಲ್ಲಿ ಮಹಾತ್ಮ ಗಾಂಧೀಜಿಯವರಿಗೆ ಸಾತ್ ಕೊಟ್ಟ ಏಕೈಕ ಸಂಸ್ಥೆ. ಜಾತಿ, ಧರ್ಮ, ಭಾಷೆಯ ಭೇದಭಾವವಿಲ್ಲದೆ ಎಲ್ಲರನ್ನು ಒಂದಾಗಿ ಕಾಣುತ್ತಾ, ಭಾವೈಕ್ಯತೆಯನ್ನು ಪ್ರೋತ್ಸಾಹಿಸುವ ಸಂಸ್ಥೆ ಇದಾಗಿದೆ ಎಂದು ಹೇಳಿದರು.

ಜಿಲ್ಲಾ ಸಮಿತಿ ಸದಸ್ಯ ಶ್ರೀಮಂತ ಇಂಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದಿನ ಪೀಳಿಗೆಯಲ್ಲಿ ದೇಶದ ಬಗ್ಗೆ ಅಪಾರ ಗೌರವ, ದೇಶಭಕ್ತಿ ಮತ್ತು ಐಕ್ಯತಾ ಮನೋಭಾವವನ್ನು ಬೆಳೆಸುವುದು ಈ ಸಂಸ್ಥೆಯ ಮುಖ್ಯ ಗುರಿಯಾಗಿದೆ.ಎಲ್ಲರೂ ಸೇವಾದಳದ ಚಟುವಟಿಕೆಯನ್ನು ಚುರುಕುಗೊಳಿಸಬೇಕು ಎಂದು ಹೇಳಿದರು. ಜಿಲ್ಲಾ ಸಂಘಟಕ ನಾಗೇಶ ಡೋಣುರ ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತ ಸೇವಾದಳಕ್ಕೆ ಶಿಕ್ಷಕರೇ ಅಡಿಗಲ್ಲು. ಶಿಸ್ತುಬದ್ಧ ರಾಷ್ಟ್ರೀಯ ಸೇವೆಗಾಗಿ ತರಬೇತಿ ನೀಡುವುದೇ ಭಾರತ ಸೇವಾದಳದ ಮುಖ್ಯ ಉದ್ದೇಶ ಎಂದು ಹೇಳಿದರು. ಸರಕಾರಿ ನೌಕರರ ಸಂಘದ ತಾಲ್ಲೂಕಾಧ್ಯಕ್ಷ ಬಸವರಾಜ ರಾವೂರ, ತಾಲ್ಲೂಕ ಪ್ರಧಾನ ಕಾರ್ಯದರ್ಶಿ ಮಹಾದೇವ ಪ್ಯಾಟಿ ಮಾತನಾಡಿದರು.

## ಪುತ್ತೂರಿನ ರಾಮ್ ಪ್ರಸಾದ್‌ಗೆ ಕೇಂದ್ರ ನಗದು ಪುರಸ್ಕಾರ

• **ಉದಯವಾಹಿನಿ ಪುತ್ತೂರು:**

ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆ ವಿಬಿಜಿ ರಾಮ್ ಜಿ ಯೋಜನೆಗಾಗಿ ಆಯೋಜಿಸಿದ್ದ ರಾಷ್ಟ್ರಮಟ್ಟದ ಲೋಗೋ ವಿನ್ಯಾಸ ಸ್ಪರ್ಧೆಯಲ್ಲಿ ಪುತ್ತೂರಿನ ಕಲಾವಿದ ರಾಮ್ ಪ್ರಸಾದ್ ಕೆ. ಪ್ರಥಮ ಸ್ಥಾನ ಪಡೆದು ರು.50 ಸಾವಿರ ನಗದು ಪುರಸ್ಕಾರ ಪಡೆದುಕೊಂಡಿದ್ದಾರೆ. ನವದೆಹಲಿಯ ಪೂಸಾದಲ್ಲಿ ನಡೆದ ರಾಷ್ಟ್ರೀಯ ಗ್ರಾಮೀಣ ವಿಕಾಸ ಸಮ್ಮೇಳನ-2026ರಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾನ್ ಅವರು ರಾಮ ಪ್ರಸಾದ್‌ಗೆ ಪ್ರಶಸ್ತಿ ಪ್ರದಾನ ಮಾಡಿದರು. ರಾಜ್ಯ ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ, ವಿವಿಧ ರಾಜ್ಯಗಳ ಸಚಿವರು, ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು. ವಿಕಸಿತ್ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಆ್ಯಂಡ್ ಅಜೀವಿಕಾ ಮಿಷನ್ (ಗ್ರಾಮೀಣ) ವಿಬಿ ರಾಮ್ ಜಿ ಕಾಯ್ದೆ-2025ರ ಪ್ರಚಾರ-ಜಾಗೃತಿಯ ನಿಟ್ಟಿನಲ್ಲಿ ಮೈ ಭಾರತ್ ಮತ್ತು ಮೈ ಜಿಒವಿ ಸಹಯೋಗದೊಂದಿಗೆ ಲೋಗೋ ವಿನ್ಯಾಸ, ರೀಲ್/ವೀಡಿಯೋ ಚಾಲೆಂಜ್, ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

# ಬಡವರಿಗಿಲ್ಲಾ ಇಂದಿರಾ ಹೊಟ್ಟೆತುಂಬಾ ಊಟಾ

## ಕಳೆದ 1 ವರ್ಷದಿಂದ ಪ್ರಾರಂಭಗೊಂಡಿರುವ ಇಂದಿರಾ ಕ್ಯಾಂಟಿನ್‌ನಲ್ಲಿ ಸ್ವಚ್ಚತೆ ಎಂಬುದೇ ಮರಿಚಿಕೆಯಾಗಿದೆ

• **ಉದಯವಾಹಿನಿ ತಾಳಿಕೋಟೆ:**

ಬಡವರಿಗೆ ಕೂಲಿ ಕಾರ್ಮಿಕರಿಗೆ ಕೈಗೆಟಕುವ ದರದಲ್ಲಿ ಹೊಟ್ಟೆತುಂಬಾ ಊಟ ಸಿಗಲೆಂಬ ಉದ್ದೇಶದಿಂದ ಮಹತ್ವಾಕಾಂಕ್ಷೀ ಯೋಜನೆಯ ಮೂಲಕ ರಾಜ್ಯದೆಲ್ಲಡೆ ಇಂದಿರಾ ಕ್ಯಾಂಟಿನ್ ಪ್ರಾರಂಬಿಸಿದ್ದರೆ

**1 : ಸರ್ಕಾರದ ದುಡ್ಡು ಪೋಲು**
**2 : ಒಪ್ಪತ್ತಿನ ತುತ್ತಿನ ಚೀಲ**
**3 : 50 ಜನರಿಗೆ ಉಪಹಾರ**

ತಾಳಿಕೋಟೆಯಲ್ಲಿಯ ಇಂದಿರಾ ಕ್ಯಾಂಟಿನ್ ಗುತ್ತಿಗೆದಾರನ ಕರಾಮತ್ತಿನಿಂದ ಬಡವರಿಗೆ ಊಟವೇ ಸಿಗದಂತಹ ಪರಸ್ಥಿತಿ ಎದುರಾಗಿದೆ. ಇಂದು ಕ್ಯಾಂಟಿನ್ ಓಪನ್ ಆಗಿದ್ದರೆ ನಾಳೆ ಬಂದ್ ಆಗಿರುತ್ತದೆ ದಿನಕ್ಕೆ ಕನಿಷ್ಠ ಬೆಳಿಗ್ಗ 300 ಜನರಿಗೆ ಉಪಹಾರ ಮಧ್ಯಾಹ್ನ 300 ಜನರಿಗೆ ಊಟ ಸಂಜೆ 300 ಜನರಿಗೆ ಊಟವೆಂಬ ನಿಯಮವಿದ್ದರೂ ಕೂಡಾ ಎಲ್ಲವನ್ನು ಗಾಳಿಗೆ ತೋರಲಾಗಿದ್ದು ಮೊದಲು ಬಂದವರಿಗೆ ಮಾತ್ರ ಆದ್ಯತೆ ಎಂಬಂತಾಗಿದೆ. ಬೆಳಿಗ್ಗ 8 ಗಂಟೆಗೆ ಪ್ರಾರಂಭವಾದರೆ ಅರ್ದಗಂಟೆಯಲ್ಲಿ ಸುಮಾರು 50 ಜನರಿಗೆ ಉಪಹಾರ ಸಿಗುವದೇ ಕಷ್ಟವಾಗಿದೆ ಮದ್ಯಾಹ್ನ ತೆರೆದರೆ ಸಂಜೆ ತೆರೆಯುವದಿಲ್ಲಾ ಸಂಜೆ ತೆರೆದರೆ ಮದ್ಯಾಹ್ನ ತೆರೆಯುವದಿಲ್ಲಾ ಇದು ಇಂದಿರಾ ಕ್ಯಾಂಟಿನ್‌ಗೆ ಬಂದ ದುರ್ಗತಿಯಾಗಿದೆ.


ಉದಯವಾಹಿನಿ ಚಿತ್ರ

ಇಂದಿರಾ ಕ್ಯಾಂಟಿನ್‌ಗೆ ಆಗಮಿಸುವ ಗ್ರಾಹಕರಿಗೆ ಶುದ್ದ ಕುಡಿಯುವ ನೀರು ಒದಗಿಸಬೇಕೆಂಬ ನಿಯಮವಿದ್ದರೂ ಕೂಡಾ ಪ್ಯೋರಾಯ್ಡ್ ಯುಕ್ತ ಬೋರವ್ಹೇಲ್ ನೀರನ್ನು ಇಡಲಾಗಿರುತ್ತದೆ ಇಂದು ಬೋರವ್ಹೇಲ್ ನೀರು ಸೇಕರಿಸಿದ್ದರೆ ವಾರಗಟ್ಟಲೇ ನೀರು ಬದಲಾವಣೆಯಾಗುವದಿಲ್ಲಾ ನೀರು ಸಂಪೂರ್ಣ ಖಾಲೆಯಾದ ನಂತರವೇ ಮತ್ತೇ ನೀರು ತುಂಬಿಸಲಾಗುತ್ತದೆ ಕುಡಿಯಲು ಮತ್ತು ಗ್ರಾಹಕರು ತಿಂದ ಪ್ಲೇಟ್ ತೊಳೆಯಲು ಎಲ್ಲದಕ್ಕೂ ಇದೇ ನೀರನ್ನೇ ಬಳೆಸಲಾಗುತ್ತಿದೆ.

**ಸ್ವಚ್ಚತೆ ಎಂಬುದು ಮರಿಚಿಕೆ**

ಕಳೆದ 1 ವರ್ಷದಿಂದ ಪ್ರಾರಂಭಗೊಂಡಿರುವ ಇಂದಿರಾ ಕ್ಯಾಂಟಿನ್‌ನಲ್ಲಿ ಸ್ವಚ್ಚತೆ ಎಂಬುದೇ ಮರಿಚಿಕೆಯಾಗಿದೆ ಗ್ರಾಹಕರು ತಿಂದ ಪ್ಲೇಟ್‌ದಿಂದ ಚೆಲ್ಲಿದ ಎಲ್ಲಾ ಮುಸರೆಯನ್ನು ಮರುದಿನವೇ ಸ್ವಚ್ಚಮಾಡಲಾಗುತ್ತಿದ್ದರಿಂದ ಕ್ಯಾಂಟಿನ್‌ಗೆ ಆಗಮಿಸುವ ಗ್ರಾಹಕರಿಗೆ ತಲೆಗಿಂವಿಗುಟುವ ವಾಸನೆ ಇಂದಿರಾ ಕ್ಯಾಂಟಿನತ್ತ ಮುಖಮಾಡದಂತೆ ಮಾಡುತ್ತಿದೆ. ಉಳಿದು ಚೆಲ್ಲಿದ ಪದಾರ್ಥ ಮುಂದಿನ ಚರಂಡಿಗೆ ಚೆಲ್ಲಲಾಗುತ್ತಿದೆ ಸ್ವಚ್ಚತೆಯ ದೃಷ್ಠಿಯಿಂದಾದರೂ ಚರಂಡಿಗೆ ನೀರು ಬಿಟ್ಟು ಸ್ವಚ್ಚತೆ ಕಾಪಾಡಬಹುದಿತ್ತು ಆದರೆ ಇದ್ಯಾವುದನ್ನು ಮಾಡದೇ ಸಾಗಿದ್ದರಿಂದ ಕ್ಯಾಂಟಿಗೆ ಗ್ರಾಹಕರು ಬರಲು ಹಿಂದೇಟು ಹಾಕುವಂತೆ ಮಾಡಿದೆ.

> ಇಂದಿರಾ ಕ್ಯಾಂಟಿನಲ್ಲಿ ಬಡವರಿಗೆ ಉಪಹಾರ ಮತ್ತು ಊಟ ಸಿಗುವದರ ಬಗ್ಗೆ ಮತ್ತು ಸ್ವಚ್ಚತೆ ಇಲ್ಲದಿರುವ ಬಗ್ಗೆ ಹಾಗೂ ಶುದ್ದಿ ಕುಡಿಯುವ ನೀರು ಬಳಕೆ ಮಾಡದಿರುವ ಬಗ್ಗೆ ದೂರು ಬಂದಿದೆ ಕೂಡಲೇ ಕ್ಯಾಂಟಿಗೆ ಬೆಟ್ಟಿ ನೀಡಿ ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸುತ್ತೇನೆ.
> -ವಸಂತ ಪವಾರ ಮುಖ್ಯಾಧಿಕಾರಿ ಪುರಸಭೆ ತಾಳಿಕೋಟೆ

> ತಾಳಿಕೋಟೆಯ ಇಂದಿರಾ ಕ್ಯಾಂಟಿನಲ್ಲಿ ಬಡವರಿಗೆ ಉಪಹಾರವು ಮತ್ತು ಊಟವೂ ಸಿಗುತ್ತಿಲ್ಲಾ ಒಂದು ದಿನ ತಗೆದರೆ ಮರುದಿನ ಮುಚ್ಚಿರುತ್ತದೆ ನಿತ್ಯ ನೂರಾರು ಜನ ಕೂಲಿಕಾರ್ಮಿಕರು ಆಗಮಿಸುತ್ತಾರೆ ಕೆಲವು ಜನರಿಗೆ ಉಪಹಾರ, ಊಟ ಸಿಕ್ಕರೆ ಇನ್ನು ಕೆಲವು ಜನರಿಗೆ ಸಿಗುವದಿಲ್ಲಾ ಸ್ವಚ್ಚತೆ ಎಂಬುದು ಮರಿಚಿಕೆಯಾಗಿದೆ ಗುತ್ತಿಗೆದಾರನು ಬೇಕಾಬಿಟ್ಟಿ ಕ್ಯಾಂಟಿನ್ ನಡೆಸುತ್ತಿದ್ದಾರೆ ಸಂಬಂದಿಸಿದ ಅಧಿಕಾರಿಗಳು ಗುತ್ತಿಗೆದಾರನ ಮೇಲೆ ಕ್ರಮ ಜರುಗಿಸಿ ಬಡವರಿಗೆ ಅನುಕೂಲ ಕಲ್ಪಿಸಬೇಕು.
> -ಬಸ್ಸು ಕಟ್ಟಿಮನಿಮಾದರ

ಬಡವರಿಗೆ ಮತ್ತು ಕೂಲಿ ಕಾರ್ಮಿಕರಿಗಾಗಿ ಪ್ರಾರಂಬಿಸಲಾಗಿರುವ ಇಂದಿರಾ ಕ್ಯಾಂಟಿನ್ ನಿರ್ವಹಣೆಗೆ ಸರ್ಕಾರವು ಲಕ್ಷಾಂತರ ರೂ. ಖರ್ಚು ವೆಚ್ಚ ಮಾಡುತ್ತಿದೆ ಆದರೆ ಬಡವರಿಗೆ ಒಪ್ಪತ್ತಿನ ತುತ್ತಿನ ಚೀಲ ತುಂಬಿಸಲೂ ಕೂಡಾ ನಿರ್ವಹಣೆಯ ಗುತ್ತಿಗೆದಾರರು ಮಾಡದಿರುವದು ಮೇಲ್ನೋಟಕ್ಕೆ ಸೊಷ್ಟವಾಗಿ ಗೋಚರಿಸುತ್ತಿದ್ದು ಸರ್ಕಾರದಿಂದ ಪ್ರತಿ ತಿಂಗಳು ಲಕ್ಷಾಂತರ ಗುತ್ತಿಗೆದಾರನು ಪಡೆದುಕೊಂಡು ತನ್ನ ಜೇಬು ತುಂಬಿಸಿಕೊಳ್ಳುತ್ತಿದ್ದಾನೆಂಬ ದೂರು ಕೂಲಿ ಕಾರ್ಮಿಕರದ್ದಾಗಿದೆ. ಇನ್ನಾದರೂ ಸಂಬಂದಿಸಿದ ಅಧಿಕಾರಿಗಳು ಇತ್ತಕಡೆ ಗಮನ ಹರಿಸಿ ಬಡವರ ಕೂಲಿ ಕಾರ್ಮಿಕರಿಗೆ ಕೈಗೆಟಕುವ ದರದಲ್ಲಿ ಹೊಟ್ಟೆತುಂಬಾ ಊಟಕೊಡಿಸಲು ಮುಂದಾಗುತ್ತಾರೋ ಕಾದು ನೋಡಬೇಕಿದೆ.



## ಮಿನಿ ನ್ಯೂಸ್

## ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಆನ್‌ಲೈನ್ ಅರ್ಜಿ ಆಹ್ವಾನ

• **ಉದಯವಾಹಿನಿ ಚಿತ್ರದುರ್ಗ.**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2026-27ನೇ ಸಾಲಿಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ (ಸಾಮಾನ್ಯ ಪದವಿ ಕೋರ್ಸ್‌ಗಳ) ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಹೊಸ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಜನಾಂಗಗಳಿಗೆ ಸೇರಿದ ಸಾಮಾನ್ಯ ಪದವಿ ಕೋರ್ಸ್‌ಗಳ ವಿದ್ಯಾರ್ಥಿಗಳು ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ.

**ಪ್ರವರ್ಗ-1, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ:** ಗರಿಷ್ಠ ರೂ. 2.50 ಲಕ್ಷ, ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಇತರ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ: ಗರಿಷ್ಠ ರೂ. 1.00 ಲಕ್ಷ ಆದಾಯ ಮಿತಿ ಹೊಂದಿರಬೇಕು.

https://shp.karnataka.gov.in/bcwd ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜುಲೈ 20 ಕೊನೆಯ ದಿನವಾಗಿದೆ. ಹೊಸ ಅರ್ಜಿಗಳನ್ನು ಜುಲೈ 23 ರಂದು ಪರಿಶೀಲನೆ ಮಾಡಲಾಗುವುದು. ಜುಲೈ 27 ರಂದು ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳು ಜುಲೈ 30 ರೊಳಗೆ ಪ್ರವೇಶ ಪಡೆಯಬೇಕು.

ಹೆಚ್ಚಿನ ವಿವರಗಳಿಗಾಗಿ ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ, ಅರ್ಹತೆ, ಮತ್ತು ಸಲ್ಲಿಸಬೇಕಾದ ದಾಖಲೆಗಳ ಮಾಹಿತಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://shp.karnataka.gov.in/bcwd ಅನ್ನು ವೀಕ್ಷಿಸಬಹುದು. ಅರ್ಜಿ ಸಲ್ಲಿಸುವಾಗ ಯಾವುದೇ ತಾಂತ್ರಿಕ ತೊಂದರೆಗಳ ಆದಲ್ಲಿ, ವಿದ್ಯಾರ್ಥಿಗಳು bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಅಧಿಕೃತ ಸಹಾಯವಾಣಿ ಸಂಖ್ಯೆ: 8050770004 ಅನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮೊಟ್ಟೆಯ ಹಣ ಕೇಳಿದ್ದಕ್ಕೆ ಅಂಗಡಿ ಮಾಲಕನ ಭೀಕರ ಕೊಲೆ

• **ಉದಯವಾಹಿನಿ ಹಾವೇರಿ, :**

ಮೊಟ್ಟೆಯ ಹಣ ಕೇಳಿದ್ದಕ್ಕೆ ಅಂಗಡಿ ಮಾಲಕನ ಕೊಲೆ ನಡೆದ ಭೀಕರ ಘಟನೆ ಹಾವೇರಿ ಜಿಲ್ಲೆಯ ರಟ್ಟಿಹಳ್ಳಿಯಲ್ಲಿ ಸಂಭವಿಸಿದೆ . ರಟ್ಟಿಹಳ್ಳಿ ಪಟ್ಟಣದ ಅಂಗಡಿ ಶೆಡ್‌ವೊಂದರಲ್ಲಿ ಸಂಜೆ ಮೊಟ್ಟೆಯನ್ನು ಖರೀದಿಸಿದವರ ಬಳಿ ಮಾಲಕ ಹಣವನ್ನು ಕೇಳಿದ್ದೇ ತಪ್ಪಾಯ್ತು . ಗ್ರಾಹಕರು ಹಲ್ಲೆ ಮಾಡಿದ ಪರಿಣಾಮ ಅಂಗಡಿ ಮಾಲಕ ಶಿವಾಜಿರಾವ್ ಬೈರೋಜಿಯವರ (60) ಮೃತಪಟ್ಟಿದ್ದು, ಅವರ ಪುತ್ರ ಭರತ್ ಗಾಯಗೊಂಡಿದ್ದಾರೆ.

ತೀವ್ರ ಗಾಯಗೊಂಡ ಶಿವಾಜಿರಾವ ಬೈರೋಜಿಯವರ ಸ್ಥಳದಲ್ಲೇ ಅಸುನೀಗಿದ್ದಾರೆ. ಹಾನಗಲ್ಲ ತಾಲ್ಲೂಕಿನ ನರೇಗಲ್ ಗಲಾಟೆ ಮಾಸುವ ಮುನ್ನವೆ ರಟ್ಟಿಹಳ್ಳಿ ಪಟ್ಟಣದಲ್ಲಿ ಮತ್ತೊಂದು ಘೋರ ಘಟನೆ ನಡೆದಿದೆ. ಮೃತರ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿದ್ದು, ತಪ್ಪಿತಸ್ಥರ ವಿರುದ್ದ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಶಿವಾಜಿರಾವ್ ಬೈರೋಜಿಯವರ ಅಂಗಡಿಗೆ ಮೊಟ್ಟೆ ಖರೀದಿಸಲು ಪಟ್ಟಣದ ನಿವಾಸಿಗಳಾದ ವಾಸೀಂ ವಜೀರಸಾಬ ಮುಲ್ಲಾ, ಸರ್ಫರಾಜ ವಜೀರಸಾಬ ಮುಲ್ಲಾ, ಸಾಧಿಕ ವಜೀರಸಾಬ ಮುಲ್ಲಾ ಮತ್ತು ಸಿರಾಜ್ ವಜೀರಸಾಬ ಮುಲ್ಲಾ ಆಗಮಿಸಿದ್ದರು. ಈ ವೇಳೆ ಶಿವಾಜಿರಾವ್ ಬೈರೋಜಿಯವರ ಮತ್ತು ಮಗ ಭರತ್ ಅಂಗಡಿಯಲ್ಲಿದ್ದರು. ಮೊಟ್ಟೆ ನೀಡಿದ ಬಳಿಕ ಅವರು ಹಣ ಕೇಳಿದ್ದಾರೆ. ಈ ವೇಳೆ ಜಗಳ ಶುರುವಾಗಿ ವಾಸೀಂ ವಜೀರಸಾಬ ಮುಲ್ಲಾ ಮತ್ತಿತರರು ತಂದೆ-ಮಗನ ಮೇಲೆ ಹಲ್ಲೆ ನಡೆಸಿದರು. ಪರಿಣಾಮ ಶಿವಾಜಿರಾವ್ ಬೈರೋಜಿಯವರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಭರತ್ ಅವರಿಗೆ ಗಾಯವಾಗಿದೆ. ಈ ಕುರಿತು ರಟ್ಟಿಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಶಿಕ್ಷಣೇತರ ಕೆಲಸಕ್ಕೆ ಶಿಕ್ಷಕರ ಬಳಕೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಕುಂದಗೋಳ :**

ಶಿಕ್ಷಣೇತರ ಕೆಲಸಕ್ಕೆ ಶಿಕ್ಷಕರನ್ನು ಬಳಸುತ್ತಿರುವದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಮುಂದಿನ ಅಧಿವೇಶನದಲ್ಲಿ ಚರ್ಚಿಸಲೆತ್ನಿಸುತ್ತೇನೆ ಎಂದು ಶಾಸಕ ಎಂ.ಆರ್.ಪಾಟೀಲ ಹೇಳಿದರು. ಶಿವಾನಂದ ಮಠದ ಶಾಲಾವರಣದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕಾ ಮಟ್ಟದ ಕೆಎಮ್‌ಎಸ್ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿ ಶಾಲಾಭಿವೃದ್ಧಿ ಸಮಿತಿಯಲ್ಲಿ ರಾಜಕಾರಣ ಮಾಡುವ ಪ್ರವೃತ್ತಿಯಿಂದ ಶಾಲೆಯ ಮುಖ್ಯಶಿಕ್ಷಕರಿಗೆ ತಲೆನೋವಾಗಿತ್ತು.

ಆದರೆ ಈಗ ಅದಕ್ಕೆ ಕಡಿವಾಣ ಹಾಕಲು ಪ್ರಯತ್ನಿಸುತ್ತಿದ್ದೇನೆ ಎಂದರು. ರಾಷ್ಟ್ರಾಧ್ಯಕ್ಷ ಬಸವರಾಜ ಗುರಿಕಾರ, ರಾಜ್ಯಾಧ್ಯಕ್ಷ ಚಂದ್ರಶೇಖರ, ಜಿಲ್ಲಾಧ್ಯಕ್ಷ ವಿ.ಎಫ್. ಚುಳಕಿ ಹಾಗೂ ರಾಜಶೇಖರ ಹೊನ್ನಪ್ಪನವರ್, ಜಯಕುಮಾರ್ ಹೆಬ್ಬಿ, ಅಜಿತ್ ದೇಸಾಯಿ, ಎಂ .ಎಂ ಗೋಡಕಿಂಡಿ, ಎನ್ ಎಫ್ ನದಾಫ್ ಕಾನಿಪ ತಾಲೂಕು ಅಧ್ಯಕ್ಷ ಅಶೋಕ ಘೋರ್ಪಡೆ ಮತ್ತಿತರರಿದ್ದರು.

## 'ಡೈಮಂಡ್ ಪ್ಲಸ್ ಎಕ್ಸಲೆನ್ಸ್ ಅವಾರ್ಡ್'

• **ಉದಯವಾಹಿನಿ ಮಂಗಳೂರು:**

ರೋಟರಿ ಕ್ಲಬ್ ಮಂಗಳೂರು ಸೆಂಟ್ರಲ್‌ಗೆ 'ಡೈಮಂಡ್ ಪ್ಲಸ್ ಎಕ್ಸಲೆನ್ಸ್ ಅವಾರ್ಡ್ ಸಮಗ್ರ ಪ್ರಶಸ್ತಿ ದೊರೆತಿದೆ.'2025 - 26ನೇ ಸಾಲಿನಲ್ಲಿ ಸಮಾಜಮುಖಿ ಸೇವೆ, ಸದಸ್ಯತ್ವ ಅಭಿವೃದ್ಧಿ, ಪ್ರಕೃತಿ, ಪರಿಸರ, ಆರೋಗ್ಯ ಶಿಕ್ಷಣ, ನೆಲ ಜಲ- ಪರಿಸರ ಸಂರಕ್ಷಣೆ, ಕೃಷಿ, ಕಲೆ ಸಾಹಿತ್ಯ ಸಂಸ್ಕೃತಿ, ಕ್ರೀಡೆ, ಕಂಬಳ, ಸಮುದಾಯ ಕಲ್ಯಾಣ, ಅಂಗನವಾಡಿ, ವೃದ್ಧಾಶ್ರಮ, ಮಹಿಳಾ ಮತ್ತು ಮಕ್ಕಳ ಆರೋಗ್ಯ ಎಂಎಸ್‌ಎಂಇಮೂಲಕ ಸ್ವ ಉದ್ಯೋಗ, ಕೈಗಾರಿಕೆ ಉದ್ಯಮಗಳಿಗೆ ಪ್ರೋತ್ಸಾಹ, ಶುದ್ಧ ಕುಡಿಯುವ ನೀರಿನ ಆದ್ಯತೆ, ವಿವಿಧ ಇಲಾಖೆಗಳ ಸಹಯೋಗದಲ್ಲಿ ಸಮಾಜಮುಖಿ ಕೆಲಸಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕೈಗೊಂಡ ಅನೇಕ ಜನಪರ ಸೇವಾ ಕಾರ್ಯಕ್ರಮಗಳನ್ನು ಪರಿಗಣಿಸಿ ರೋಟರಿ ಅಂತರ್‌ರಾಷ್ಟ್ರೀಯ ಜಿಲ್ಲೆ 3181ರ ಜಿಲ್ಲಾ ಅತ್ಯುತ್ತಮ ಪ್ರಶಸ್ತಿಯಾದ 'ಡೈಮಂಡ್ ಪ್ಲಸ್ನ್ನು ರೋಟರಿ ಕ್ಲಬ್ ಮಂಗಳೂರು ಸೆಂಟ್ರಲ್ ಮುಡಿಗೇರಿಸಿಕೊಂಡಿದೆ ಎಂದು ರೋಟರಿ ಕ್ಲಬ್ ಮಂಗಳೂರು ಸೆಂಟ್ರಲ್ ಅಧ್ಯಕ್ಷ ಭಾಸ್ಕರ್ ರೈ ಕಟ್ಟ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

